ಸಂಪುಟ : 9 ಸಂಚಿಕೆ 46 ಪುಟ : 4 ಬೆಲೆ: 3.00 ಮಂಗಳವಾರ ಮಾರ್ಚ್ 19 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

WALK IN INTERVIEW
Vacancy open
Bagalkot , Bijapur , Bidar , Kalaburgi, Mangalore , Belgaum
(Required For Bank Recovery and Collections)
- Filed collection Executive
- Two wheeler Must
- Salary up to 15000/- & Attractive Incentives Facility
Contact Number : 8310034934

Volume : 9 Issue : 46 Pages : 4 Price : 3.00 Tuesday March 19 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 19ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ** : ವಾರ್ಡ್ ನಂ. 7, 6, 10ರಲ್ಲಿ ಪಂಚ ಲಕ್ಷ್ಮೀ ಬಡಾವಣೆ, ಭಾಗ-1, 2, 3, 4 ಭಜಂತ್ರಿ ಓಣಿ, ಅಂಬೇಡ್ಕರ್ ನಗರ ಹರಿಜನಕೇರಿ, ಕುಲಕರ್ಣಿ ಗಲ್ಲಿ, ದಿಬ್ಬದ ಲೈನ್, ವಾರ್ಡ್ ನಂ. 26ರಲ್ಲಿ ಕಾಶಿ ವಿಶ್ವನಾಥನಗರ, ಅಸೂಟಿಯವರ ಲೈನ್, ಹನಮಂತದೇವರ ಗುಡಿ ಲೈನ್, ದುರ್ಗಮ್ಮನ ಗುಡಿ ಲೈನ್, ಕಣವಿಯವರ ಲೈನ್, ವಾರ್ಡ್ ನಂ. 33ರಲ್ಲಿ ಮುಳಗುಂದ ರೋಡ್, ಕೇಶವನಗರ ಹುಬ್ಬಳ್ಳಿರಸ್ತೆ, ಬ್ಯಾಂಕರ್ಸ್ ಕಾಲನಿಯ ಲೈನ್, ವೀರೇಶ್ವರನಗರ, ಕೇಶವನಗರ ಜಾಕೀರ ಹುಸೇನ್ ಕಾಲೋನಿ ಲೈನ್.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಸಾಹಿತ್ಯ ಆಕಾಡೆಮಿ ಸದಸ್ಯರಾಗಿ ಡಾ.ಅರ್ಜುನ ಗೊಳಸಂಗಿ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ



ದಲಿತ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷರು, ಸಾಹಿತಿಗಳು ಹಾಗೂ ಚಿಂತಕರಾದ ಡಾ.ಅರ್ಜುನ ಗೊಳಸಂಗಿ ಕನ್ನಡ ಸಾಹಿತ್ಯ ಪರಿಷತ್ ಸದಸ್ಯರಾಗಿ ಆಯ್ಕೆಯಾಗಿದ್ದಾರೆ.

ಕಳೆದ ಮೂರು ದಶಕಗಳಿಂದ ದಲಿತ ಸಾಹಿತ್ಯ ಪರಿಷತ್ ಮೂಲಕ ರಾಜ್ಯಾದ್ಯಂತ ವೈವಿಧ್ಯಮಯ ಕಾರ್ಯಚಟುವಟಿಕೆಗಳನ್ನು ಸಂಘಟಿಸುತ್ತಾ ಸಾಹಿತ್ಯ ಕ್ಷೇತ್ರದಲ್ಲೂ ತಮ್ಮದೇ ಛಾಪು ಮೂಡಿಸಿದ್ದಾರೆ. ಡಾ. ಅರ್ಜುನ ಗೊಳಸಂಗಿಯವರು ಸಾಹಿತ್ಯ ಕ್ಷೇತ್ರದಲ್ಲಿ ಸಲ್ಲಿಸಿರುವ ಗಣನೀಯವಾದ ಸೇವೆಯನ್ನು ಪರಿಗಣಿಸಿ ಕರ್ನಾಟಕ ಸರ್ಕಾರವು 2024ನೆಯ ಸಾಲಿನ ಕರ್ನಾಟಕ ಸಾಹಿತ್ಯ ಅಕಾಡೆಮಿಯ ನೂತನ ಸದಸ್ಯರನ್ನಾಗಿ ಆಯ್ಕೆಮಾಡಿದೆ. ಡಾ.ಅರ್ಜುನ ಗೊಳಸಂಗಿಯವರ ಅಭಿಮಾನಿಗಳು, ಶಿಷ್ಯರು ಹಾಗೂ ಒಡನಾಡಿಗಳು ಸಂತಸ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

## ಕಂಟ್ರೋಲ್ ರೂಂ, ಸಹಾಯವಾಣಿ ಸ್ಥಾಪನೆ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಸಾರ್ವಜನಿಕರಿಗೆ ಜಿಲ್ಲೆಯಲ್ಲಿ ಅಹವಾಲು ಅಥವಾ ದೂರುಗಳನ್ನು ಸಲ್ಲಿಸಲು ಕಂಟ್ರೋಲ್ ರೂಂ ಗಳನ್ನು ಸ್ಥಾಪಿಸಲಾಗಿದ್ದು, ಸಾರ್ವಜನಿಕರು ಕೆಳಕಂಡ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆಗಳನ್ನು ಸಂಪರ್ಕಿಸಬಹುದಾಗಿದೆ.

ಜಿಲ್ಲಾಧಿಕಾರಿಗಳ ಕಾರ್ಯಾಲಯದ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ (ಡಿಇಓ ಆಫೀಸ್ )-08372-239177, 08372-1950; ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ ಸಂಖ್ಯೆ 08372-238300, 9480804400, ಜಿಲ್ಲಾ ಅಬಕಾರಿ ಇಲಾಖೆಯ ಕಂಟ್ರೋಲ್ ರೂಂ ಸಂಖ್ಯೆ 08372-221129, 18004252329, ಜಿಲ್ಲಾ ವಾಣಿಜ್ಯ ತೆರಿಗೆ ಕಂಟ್ರೋಲ್ ರೂಂ ಸಂಖ್ಯೆ 9008937878, 08372-238307 ಈ ಮೇಲ್ಕಂಡ ಕಂಟ್ರೋಲ್ ರೂಂ ದೂರವಾಣಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ.

### ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ

# ನಿಮ್ಮ ಸೇವೆ ಮಾಡುವ ಅವಕಾಶ ಕೊಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಬಿಜೆಪಿ ಅಧಿಕಾರಕ್ಕೆ ಬಂದಾಗಷ್ಟೆ ಗದಗ ಮತಕ್ಷೇತ್ರ ಅಭಿವೃದ್ಧಿಯಾಗಿದೆ. ಆದರೆ ಅದರ ಶ್ರೇಯಸ್ಸು ಪಡೆಯಲು ಸಾಧ್ಯವಾಗಿಲ್ಲ. ಮುಂದಿನ ದಿನಗಳಲ್ಲಿ ಈಗಿರುವ ಅಭಿವೃದ್ಧಿಗೆ ಮತ್ತಷ್ಟು ಪುಷ್ಟಿ ನೀಡಿ ಅದರ ಶ್ರೇಯಸ್ಸನ್ನು ಜನರಿಗೆ ಸಲ್ಲುವಂತೆ ಮಾಡಲಾಗುವುದು. ನಾನು ಕೇವಲ ಲೋಕಸಭೆ ಅಭ್ಯರ್ಥಿಯಾಗಿ ಮಾತ್ರವಲ್ಲ, ನಗರಸಭೆ ಸದಸ್ಯ, ಶಾಸಕನಾಗಿಯೂ ನಿಮ್ಮ ಸೇವೆ ಮಾಡುವ ಅವಕಾಶ ಕೊಡಿ ಎಂದು ಮಾಜಿ ಮುಖ್ಯಮಂತ್ರಿ, ಹಾವೇರಿ-ಗದಗ ಲೋಕಸಭೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಕಾರ್ಯಕರ್ತರಲ್ಲಿ ವಿನಂತಿಸಿದರು.

ಸೋಮವಾರ ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ನರೇಂದ್ರ ಮೋದಿ ಅಧಿಕಾರಕ್ಕೆ ಬಂದ ನಂತರ ರಾಜ್ಯದಲ್ಲಿ ಅನ್ನ, ಆಶ್ರಯ, ಆರೋಗ್ಯ ಸೌಲಭ್ಯ ಸಿಕ್ಕಿದೆ. ಜಾತಿ-ಧರ್ಮ-ಮತ-ಪಂಥ ನೋಡದೆ ಎಲ್ಲ ವರ್ಗದ ಜನರ ಕಲ್ಯಾಣಕ್ಕಾಗಿ ಯೋಜನೆ ಜಾರಿ ಮಾಡಿದರು. ಗದಗ-ಬೆಟಗೇರಿ ಅವಳಿ ನಗರದ ಅಭಿವೃದ್ಧಿ ಅಮೃತ




ಯೋಜನೆಯಡಿ 190 ಕೋಟಿ ರೂ. ಅನುದಾನ ಒದಗಿಸಿದ್ದಾರೆ. ಕಿಸಾನ್ ಸಮ್ಮಾನ್ ಯೋಜನೆಯಡಿ ಗದಗ ಜಿಲ್ಲೆಯ 1.24 ಲಕ್ಷ ರೈತರಿಗೆ 347 ಕೋಟಿ ರೂ. ಸೌಲಭ್ಯ ದೊರೆತಿದೆ. ಇಂಥ ಹತ್ತು ಹಲವಾರು ಕಾರಣಕ್ಕಾಗಿ ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಬೆಂಬಲಿಸಬೇಕಿದೆ ಎಂದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ರಾಜ್ಯದ 28 ಕ್ಷೇತ್ರಗಳ ಪೈಕಿ ಹಾವೇರಿ-ಗದಗ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರು ಅತಿ ಹೆಚ್ಚಿನ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆ. ಆ ಮೂಲಕ ನರೇಂದ್ರ ಮೋದಿ ಮೂರನೆ ಬಾರಿಗೆ ಪ್ರಧಾನ ಮಂತ್ರಿಯಾಗಿ ದೇಶದ ಆರ್ಥಿಕತೆಯನ್ನು ಮತ್ತಷ್ಟು ಬಲಿಷ್ಠಗೊಳಿಸಲಿದ್ದಾರೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಸಕ ಅರವಿಂದ ಬೆಲ್ಲದ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಮುಖಂಡರಾದ ಕಾಂತಿಲಾಲ್ ಬನ್ಸಾಲಿ, ಡಾ. ಶೇಖರ ಸಜ್ಜನರ, ಎಂ.ಎಸ್. ಕರಿಗೌಡ್ರ, ಉಮೇಶಗೌಡ ಪಾಟೀಲ, ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ರವಿ ದಂಡಿನ, ಅನಿಲ ಅಬ್ಬಿಗೇರಿ, ಪ್ರಶಾಂತ ನಾಯ್ಕರ್, ಮಂಜುನಾಥ ಅಬ್ಬಿಗೇರಿ, ನಾಗರಾಜ ಕುಲಕರ್ಣಿ, ಮಹೇಶ ದಾಸರ ಮುಂತಾದವರು ಉಪಸ್ಥಿತರಿದ್ದರು.



### ಆರಂಭದಲ್ಲೇ ವ್ಯಕ್ತವಾದ ಅಸಮಾಧಾನ

ಕಾರ್ಯಕರ್ತರ ಸಭೆಯ ಆರಂಭಕ್ಕೂ ಮುನ್ನ ಮುಂಡರಗಿ ಮಂಡಲದ ಬಿಜೆಪಿ ಕಾರ್ಯಕರ್ತರು ಬಸವರಾಜ ಬೊಮ್ಮಾಯಿ ಅವರಿಗೆ ಮನವಿ ಸಲ್ಲಿಸಲು ಮುಂದಾದಾಗ, ಕಾರ್ಯಕರ್ತರ ಮಧ್ಯೆ ಬಿರುಸಿನ ಜಟಾಪಟಿ ಆರಂಭವಾಯಿತು. ಮುಂಡರಗಿ ಮಂಡಲ ಅಧ್ಯಕ್ಷ ಹೇಮಗಿರೀಶ ಹಾವಿನಾಳ ಅವರನ್ನು ಬದಲಾವಣೆ ಮಾಡಬೇಕು ಎಂದು ಕಾರ್ಯಕರ್ತರು ಧ್ವನಿಯೇರಿಸಿ ಆಗ್ರಹಿಸಿದ್ದರಿಂದ ಸಭೆಯಲ್ಲಿ ಕೆಲಕಾಲ ಗೊಂದಲ ಸೃಷ್ಟಿಯಾಯಿತು. ಈ ವೇಳೆ ಮಧ್ಯಪ್ರವೇಶಿಸಿದ ಶಾಸಕ ಸಿ.ಸಿ. ಪಾಟೀಲ, ಕಾರ್ಯಕರ್ತರ ಅಭಿಪ್ರಾಯ ಗೊತ್ತಾಗಿದೆ. ಮುಂಡರಗಿಗೆ ಬಂದು ಸಮಸ್ಯೆ ಪರಿಹರಿಸುತ್ತೇವೆ ಎಂದು ಭರವಸೆ ನೀಡಿದರೂ ಕೆಲ ಕಾರ್ಯಕರ್ತರು ಸಭೆ ಬಹಿಷ್ಕರಿಸಿ ಹೊರನಡೆದರು.

### ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಯಕ ಬಂಧುಗಳ ಸಭೆ

# ಏ.1ರಿಂದ ಅಬ್ಬಿಗೇರಿಯಲ್ಲಿ ಸಮುದಾಯ ಕಾಮಗಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ತಾಲೂಕಿನಲ್ಲಿ ಅತಿ ಹೆಚ್ಚು ಮಾನವ ದಿನಗಳ ಸೃಜನೆ ಮಾಡುವ ಪಂಚಾಯತಿಯಲ್ಲಿ ಅಬ್ಬಿಗೇರಿ ಮೊದಲನೇ ಸ್ಥಾನದಲ್ಲಿದೆ. ಹಿಂದಿನ ವರ್ಷದಂತೆ ಈ ಬಾರಿಯೂ 2024-25ನೇ ಸಾಲಿನಲ್ಲಿ ಎಪ್ರಿಲ್ 1ನೇ ವಾರದಿಂದ ಸಮುದಾಯ ಕಾಮಗಾರಿ ಆರಂಭವಾಗುತ್ತಿದ್ದು, ದುಡಿಯುವ ಕೈಗಳಿಗೆ ಉದ್ಯೋಗ ನೀಡುವ ಮೂಲಕ ಗ್ರಾಮೀಣ ಜನರ ಜೀವನಮಟ್ಟ ಸುಧಾರಿಸುವ ಜೊತೆಗೆ ಗುಣಮಟ್ಟದ ಕೆಲಸ ನಿರ್ವಹಿಸುವಂತೆ ರೋಣ ತಾ.ಪಂ ಸಹಾಯಕ ನಿರ್ದೇಶಕ (ಗ್ರಾ.ಉ) ರಿಯಾಜ ಖತೀಬ್ ಹೇಳಿದರು.

ಅಬ್ಬಿಗೇರಿ ಗ್ರಾಮ ಪಂಚಾಯಿತಿಯಲ್ಲಿ ಸೋಮವಾರ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಪೂರ್ವಭಾವಿಯಾಗಿ ಆಯೋಜಿಸಿದ್ದ ಕಾಯಕ ಬಂಧುಗಳ ಸಭೆಯಲ್ಲಿ ಅವರು ಮಾತನಾಡಿದರು.

ಪ್ರತಿ ವರ್ಷದಂತೆ ಈ ವರ್ಷವೂ ಕೂಡಾ ಎಪ್ರಿಲ್‌ನಲ್ಲಿ ಅಬ್ಬಿಗೇರಿ ಗ್ರಾಮದಲ್ಲಿ ಕೂಲಿಕಾರರ



ಬೇಡಿಕೆ ಆಧರಿಸಿ ನಮೂನೆ-6 ಪಡೆಯುವ ಮೂಲಕ ಉದ್ಯೋಗ ಪ್ರಾರಂಭಿಸಲಿದ್ದು, ಕಾಯಕ ಬಂಧುಗಳಾದ ನೀವೆಲ್ಲರೂ ಕೂಲಿಕಾರರ ಆಧಾರ್ ಸಂಖ್ಯೆಗೆ ಬ್ಯಾಂಕ್ ಖಾತೆ ಸಂಖ್ಯೆ ಲಿಂಕ್ ಹಾಗೂ ಉದ್ಯೋಗ ಚೀಟಿ ಎನ್.ಸಿ.ಪಿ.ಐ ಲಿಂಕ್ ಕಡ್ಡಾಯವಾಗಿ ಮಾಡಿಸಬೇಕಾಗುತ್ತದೆ. ಇಲ್ಲದೇ ಹೋದಲ್ಲಿ ಹಣ ಜಮಾ ಆಗುವುದಿಲ್ಲ. ಅದಕ್ಕೆ ಕೆಲಸ ಮಾಡಿದ ಕೂಲಿಕಾರಿಗೆ ಅನ್ಯಾಯವಾಗುತ್ತದೆ. ಈ ಹಿನ್ನೆಲೆಯಲ್ಲಿ ತಮ್ಮೆಲ್ಲರ ಸಹಕಾರ ಅಗತ್ಯ ಎಂದರು.

ಕೆಲಸದ ಸ್ಥಳಗಳಲ್ಲಿ ಕೂಲಿಕಾರರಿಗೆ ಪ್ರಥಮ ಚಿಕಿತ್ಸೆ, ನೆರಳು, ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಆರು ತಿಂಗಳಿಂದ ಮೂರು ವರ್ಷದ ಮಕ್ಕಳಿಗೆ ಗ್ರಾ.ಪಂ.ನಿದ ಕೂಸಿನ ಮನೆ ಆರಂಭ ಮಾಡಿದ್ದು, ತಮ್ಮ ಮಕ್ಕಳನ್ನು ಅಲ್ಲಿಯೇ ಬಿಟ್ಟಿಹೋಗಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಿ.ಎಫ್.ಟಿ, ಜಿ.ಕೆ.ಎಂ, ಕಾಯಕ ಬಂಧುಗಳು ಮತ್ತು ಪಂಚಾಯತ ಸಿಬ್ಬಂದಿಗಳು ಹಾಜರಿದ್ದರು.

ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಲೋಹಿತ.ಎಮ್ ಮಾತನಾಡಿ, ಕೆಲಸದ ಸ್ಥಳದಲ್ಲಿ ಕೂಲಿಕಾರರ ಹಾಜರಾತಿಯನ್ನು ಎರಡು ಹಂತದಲ್ಲಿ ಎನ್.ಎಂ.ಎಂ.ಎಸ್ ಆ್ಯಪ್‌ನಲ್ಲಿ ಸೆರೆ ಹಿಡಿಯಬೇಕು. ಕೂಲಿಕಾರರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಎಬಿಪಿಎಸ್ ಆಗದೇ ಇರುವ ಕೂಲಿಕಾರರು ಕೂಡಲೇ ಎಬಿಪಿಎಸ್ ಮತ್ತು ಎನ್.ಸಿ.ಪಿ.ಐ ಲಿಂಕ್ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.


### ಲೋಕಸಭೆ ಚುನಾವಣೆ-2024 ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ

# ಚುನಾವಣಾ ಆಯೋಗದ ಮಾರ್ಗಸೂಚಿ ಪಾಲನೆ ಕಡ್ಡಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆಗೆ ಚುನಾವಣಾ ಆಯೋಗದ ಮಾರ್ಗಸೂಚಿಯನ್ನು ರಾಜಕೀಯ ಪಕ್ಷಗಳು ಕಡ್ಡಾಯವಾಗಿ ಪಾಲನೆ ಮಾಡಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ. ಎಂ.ಎಲ್. ಹೇಳಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರವಿವಾರ ಜರುಗಿದ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯಲ್ಲಿ ಮಾತನಾಡಿದ ಅವರು, ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಚುನಾವಣಾ ಆಯೋಗದ ಮಾರ್ಗಸೂಚಿ ಪಾಲಿಸಿ ತಾತ್ಕಾಲಿಕವಾಗಿ ಅಗತ್ಯವಿದ್ದಲ್ಲಿ ಪಕ್ಷದ ಕಚೇರಿ ಮಾಡಬಹುದು ಹಾಗೂ ಪಕ್ಷದ ಚಿನ್ಹೆ ಹೊಂದಿರುವ ಬಟ್ಟೆ ಧರಿಸಿ ಬರುವ ಹಾಗಿಲ್ಲ ಮತ್ತು ಪ್ರಚಾರಕ್ಕಾಗಿ ಪ್ರಾಣಿಗಳನ್ನು ಹಾಗೂ ಮಕ್ಕಳ ಬಳಕೆ ಮಾಡಬಾರದು ಹಾಗೂ ಪೊಲಿಂಗ್ ಸ್ಟೇಷನ್ ಒಳಗಡೆ ಮತ್ತು ದಾರ್ಮಿಕ ಸ್ಥಳಗಳಲ್ಲಿ ಸಭೆ ಪ್ರಚಾರ ಸೇರಿದಂತೆ



ಸಾಮಾಜಿಕ ಜಾಲತಾಣಗಳಲ್ಲಿ ಧರ್ಮ, ಜಾತಿಯನ್ನು ಅವಹೇಳನ ಮಾಡಬಾರದು ಎಂದು ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸೂಚಿಸಿದರು.

ಬೆಳಿಗ್ಗೆ 6 ರಿಂದ ರಾತ್ರಿ 10 ವರೆಗೆ ಪ್ರಚಾರಕ್ಕೆ ಅವಕಾಶವಿದೆ, ಎಲ್ಲರೂ ನಿಯಮಗಳನ್ನು ಸರಿಯಾಗಿ ಪಾಲನೆ ಮಾಡಲು ಅವರು ಹೇಳಿದರು.

ಪಕ್ಷದ ಪ್ರತಿನಿಧಿಗಳು ಈಗಲೇ ಮತದಾರರ ಪಟ್ಟಿಯನ್ನು ಪರಿಶೀಲನೆ ಮಾಡಿಕೊಳ್ಳಬೇಕು. ಹಾಗೂ ಎಪ್ರಿಲ್ 9ರವರೆಗೆ ಓಟರ್ ಐಡಿ ಮಾಡಿಸಲು ಅವಕಾಶವಿದ್ದು, ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಪ್ರಚಾರ ಸಾಮಗ್ರಿಗಳ ಮುದ್ರಿಸಿದ ಮಾಹಿತಿಯನ್ನು ಆಯಾ ಜಿಲ್ಲೆಯ ಚುನಾವಣೆ ಅಧಿಕಾರಿಗಳಿಗೆ ನೀಡಬೇಕು. ಮತದಾನದ ಕೊನೆಯ 48 ಗಂಟೆಯಲ್ಲಿ ಚುನಾವಣಾ ಅಕ್ರಮಕ್ಕೆ ಅವಕಾಶ ನೀಡದೆ ಸರಿಯಾಗಿ ಮಾರ್ಗಸೂಚಿ ಅರಿತು ಪಾಲಿಸಬೇಕು ಹಾಗೂ ಚುನಾವಣಾ ವೆಚ್ಚದ ಬಗ್ಗೆ ಅಭ್ಯರ್ಥಿಗಳು ಗಮನಹರಿಸಬೇಕು ಎಂದು ಡಿಸಿ ಹೇಳಿದರು.

85 ವರ್ಷದ ಮೇಲ್ಪಟ್ಟ ವಯಸ್ಸಿನವರಿಗೆ ಮನೆಯಿಂದಲೇ ಮತದಾನ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಅದರ ಸದುಪಯೋಗ ಪಡೆದುಕೊಳ್ಳಬೇಕೆಂದು ಎಂದು ಅವರು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಸಿಇಒ ಭರತ್ ಎಸ್. ಮಾತನಾಡಿ, ಮಾದರಿ ನೀತಿ ಸಂಹಿತೆಯನ್ನು ಎಲ್ಲ ರಾಜಕೀಯ ಪಕ್ಷಗಳು ಸೇರಿದಂತೆ ಎಲ್ಲರೂ ಪಾಲಿಸಬೇಕು. ಚುನಾವಣೆಯ ಮತದಾನವನ್ನು ಎಲ್ಲರೂ ಪ್ರಜಾತಂತ್ರದ ಸಂಭ್ರಮದಂತೆ ಆಚರಣೆ ಮಾಡಿ, ಪಾಲ್ಗೊಂಡು ಮತ ಚಲಾಯಿಸಬೇಕು ಎಂದರು.

ಸಭೆಯಲ್ಲಿ ಇಲಾಖೆಯ ಅಧಿಕಾರಿಗಳು, ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಜರಿದ್ದರು.

### ಜಿಲ್ಲಾ ದೂರು ನಿರ್ವಹಣಾ ಕೇಂದ್ರ

ಜಿಲ್ಲೆಯಲ್ಲಿ ಯಾವುದೇ ರೀತಿ ದೂರುಗಳ ನಿರ್ವಹಣೆಗಾಗಿ ಸೈಯದ್ ಜೋಹೈಬುಲ್ಲಾ, ಜಿಲ್ಲಾ ವ್ಯವಸ್ಥಾಪಕರು, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಗದಗ (ಮೊ.ನಂ: 8277944217) ಇವರನ್ನು ನೋಡಲ್ ಅಧಿಕಾರಿಗಳೆಂದು ನೇಮಕ ಮಾಡಲಾಗಿದೆ. ಇವರ ಅಧೀನದಲ್ಲಿ Complaint Monitoring Team, CVIGL ತಂಡ, 1950 ಕಾಲ್ ಸೆಂಟರ್ ಹಾಗೂ ಜಿಲ್ಲಾ ಕಂಟ್ರೋಲ್ ರೂಂ ಕಾರ್ಯನಿರ್ವಹಿಸುತ್ತವೆ.

ಸಿವಿಜಿಲ್, 1950 ಬಳಕೆಮಾಡಿ ದೂರು ನೀಡಿ, ಮಾಹಿತಿ ಪಡೆಯಿರಿ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

### ಪ್ರಿಂಟಿಂಗ್ ಪ್ರೆಸ್ ಮಾಲೀಕರ ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್

# ಮಾರ್ಗಸೂಚಿ ಉಲ್ಲಂಘಿಸಿದಲ್ಲಿ ಕಠಿಣ ಶಿಕ್ಷೆ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆಗೆ ಈಗಾಗಲೇ ಚುನಾವಣಾ ಆಯೋಗದಿಂದ ವೇಳಾಪಟ್ಟಿ ಪ್ರಕಟಿಸಲಾಗಿದೆ. ಆಯೋಗದ ಮಾರ್ಗಸೂಚಿಯಡಿಯಲ್ಲಿ ಜಿಲ್ಲೆಯ ಪ್ರಿಂಟಿಂಗ್ ಪ್ರೆಸ್ ಮಾಲೀಕರು ಚುನಾವಣಾ ಪ್ರಚಾರದ ಸಾಮಗ್ರಿಗಳ ಮುದ್ರಣ ಕಾರ್ಯ ಮಾಡಬೇಕು. ತಪ್ಪಿದಲ್ಲಿ ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳೂ ಆಗಿರುವ ವೈಶಾಲಿ ಎಂ.ಎಲ್ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿ ಸೋಮವಾರ ಜರುಗಿದ ಪ್ರಿಂಟಿಂಗ್ ಪ್ರೆಸ್ ಮಾಲೀಕರ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚುನಾವಣಾ ಆಯೋಗವು ನೀಡಿರುವ ಮಾರ್ಗಸೂಚಿಗಳನ್ನು



ಪಾಲಿಸಿ ಮುದ್ರಕರು ಕಾರ್ಯ ನಿರ್ವಹಿಸಬೇಕು. ಜೊತೆಗೆ ಎಲ್ಲರೂ ಮಾದರಿ ನೀತಿ ಸಂಹಿತೆಯನ್ನು ಕಡ್ಡಾಯವಾಗಿ ಪಾಲಿಸಬೇಕು. ಪ್ರಿಂಟಿಂಗ್ ಪ್ರೆಸ್ ಮಾಲೀಕರಿಗೆ ಆಯೋಗವು ನೀಡಿರುವ ಮಾರ್ಗಸೂಚಿಗಳ ಉಲ್ಲಂಘನೆಯಾದಲ್ಲಿ ಆರು ತಿಂಗಳ ಜೈಲು ವಾಸ ಅಥವಾ 2 ಸಾವಿರ ರೂ.ಗಳ ದಂಡ ಇಲ್ಲವೇ ಎರಡೂ ಶಿಕ್ಷೆಗಳನ್ನು ವಿಧಿಸಲು ಕಾನೂನಿನಲ್ಲಿ ಅವಕಾಶ ನೀಡಲಾಗಿದೆ. ಪ್ರಿಂಟಿಂಗ್ ಪ್ರೆಸ್ ಮಾಲೀಕರೆಲ್ಲರೂ ಆಯೋಗದ ನಿರ್ದೇಶನಗಳಂತೆ ಚುನಾವಣಾ ಪ್ರಚಾರ ಸಾಮಗ್ರಿಗಳ ಮುದ್ರಣವನ್ನು ಮಾಡಬೇಕೆಂದು ಸೂಚಿಸಿದರು.

ಕರಪತ್ರ, ಪೋಸ್ಟರ್ ಅಲ್ಲದೇ ಶಾಲು, ಕ್ಯಾಪ್, ಬಟ್ಟೆ ಮೇಲೆ ಪಕ್ಷದ ಹೆಸರು, ಚಿಹ್ನೆ ಹಾಗೂ ಅಭ್ಯರ್ಥಿಗಳ ಫೋಟೋ ಮುದ್ರಿಸುವ ಬಗ್ಗೆಯೂ ನಿಗಾವಹಿಸಲಾಗುತ್ತಿದೆ. ಎಲ್ಲಿಯೂ ಸಹ ಚುನಾವಣಾ ಅಕ್ರಮಕ್ಕೆ ಅವಕಾಶ ಇಲ್ಲ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸ್ಪಷ್ಟಪಡಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ, ಚುನಾವಣಾ ಶಾಖೆಯ ತಹಸೀಲ್ದಾರ ಪ್ರಕಾಶ ನಾಶಿ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ, ಜಿಲ್ಲಾಧಿಕಾರಿಗಳ ಕಚೇರಿಯ ಶಿರಸ್ತೇದಾರರಾದ ಎಂ.ಎಸ್. ಮೇಲ್ಮನಿ, ಎಸ್.ಪಿ. ಸಾವಳಗಿಮಠ, ವಿನಾಯಕ ಸಾಲಿಮಠ ಸೇರಿದಂತೆ ಜಿಲ್ಲೆಯ ಪ್ರಿಂಟಿಂಗ್ ಪ್ರೆಸ್ ಮಾಲೀಕರು ಹಾಜರಿದ್ದರು.

ಕರಪತ್ರ, ಭಿತ್ತಿಪತ್ರ, ಮುದ್ರಣ ಮಾಡುವಾಗ ಅವುಗಳಲ್ಲಿ ಪ್ರಿಂಟಿಂಗ್ ಪ್ರೆಸ್ ಹೆಸರು ಹಾಗೂ ಮುದ್ರಿತ ಪ್ರತಿಗಳ ಸಂಖ್ಯೆ ನಮೂದಿಸುವುದನ್ನು ಮರೆಯಬಾರದು. ಮುದ್ರಕರು ಆಯೋಗವು ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿ ಪ್ರಕಾಶಕರಿಂದ ವಿವರಗಳನ್ನು ಪಡೆದು ಮುದ್ರಣ ಕಾರ್ಯ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

## ಸಾಕ್ಷಿ ಸುಭಾಷಿತ

ಸಾಧ್ಯವಾದರೆ ಹತ್ತು ಜನರಿಗೆ ನೆರವಾಗು, ಆಗದಿದ್ದರೆ ಹಾದಿಯಲ್ಲಿ ಕಾಣುವ ಗಾಜಿನ ಚೂರನ್ನಾದರೂ ಹೆಕ್ಕಿ ಕಸದ ತೊಟ್ಟಿಗೆ ಹಾಕು.

–ಕಣ್ಣದಾಸನ್

## ಸಂಪಾದಕೀಯ

# ಬಿಜೆಪಿಗೆ ಸಂಕಷ್ಟ ಕಾಲ

ಲೋಕಸಭೆ ಚುನಾವಣೆಗೆ ದಿನಾಂಕ ನಿಗದಿ ಆಗುತ್ತಿದ್ದಂತೆಯೇ ಬಿಜೆಪಿಯಲ್ಲಿ ಅಸಮಾಧಾನ ಭುಗಿಲೆದ್ದಿದೆ. ಚುನಾವಣೆ ಸಂದರ್ಭದಲ್ಲಿ ಅಸಮಾಧಾನ ಹೊರಬರುವುದು ಸಹಜ ಪ್ರಕ್ರಿಯೆ. ಆದರೆ ರಾಜ್ಯ ಬಿಜೆಪಿಯಲ್ಲಿ ಅಸಮಾಧಾನ ದಿನದಿಂದ ದಿನಕ್ಕೆ ಹೆಚ್ಚಾಗುತ್ತಲೇ ಇದೆ.

ಒಂದೆಡೆ ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ, ತಮ್ಮ ಪುತ್ರ ಕಾಂತೇಶ್‌ಗೆ ಹಾವೇರಿ ಕ್ಷೇತ್ರದ ಟಿಕೆಟ್ ದೊರೆಯದ ಹಿನ್ನೆಲೆಯಲ್ಲಿ ಬಂಡಾಯ ಸಾರಿದ್ದಾರೆ. ಮತ್ತೊಂದೆಡೆ ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದ ಗೌಡ ಕಾಂಗ್ರೆಸ್ ಸೇರುವ ಹೊಸ್ತಿಲಲ್ಲಿದ್ದಾರೆ.

ಹೀಗೆ ದೊಡ್ಡ ನಾಯಕರು ಬ್ಲಾಕ್ ಮೇಲ್ ತಂತ್ರಕ್ಕೆ ಮೊರೆಹೋಗಿರುವ ಬೆನ್ನಲ್ಲೇ, ಜೆಡಿಎಸ್ ಸಹ ಮೈತ್ರಿ ಬಗ್ಗೆ ಅಪಸ್ವರ ಎತ್ತಿದೆ. ಜೆಡಿಎಸ್‌ಗೆ ಕೇವಲ 2 ಲೋಕಸಭಾ ಕ್ಷೇತ್ರದ ಟಿಕೆಟ್ ಪಡೆಯಲು ಮೈತ್ರಿ ಮಾಡಿಕೊಳ್ಳಬೇಕಾ ಎನ್ನುವ ಪ್ರಶ್ನೆಯನ್ನು ಕುಮಾರಸ್ವಾಮಿ ಮುಂದೆ ಇಟ್ಟಿದ್ದಾರೆ.

ಮೈತ್ರಿ ವಿಚಾರವಾಗಿ ತಮ್ಮ ಆಕ್ರೋಶವನ್ನು ಹೊರ ಹಾಕಿರುವ ಕುಮಾರಸ್ವಾಮಿ, ಲೋಕಸಭೆ ಚುನಾವಣೆಯಲ್ಲಿ ಜೆಡಿಎಸ್ ಕಡೆಗಣಿಸಿದರೆ ಬಿಜೆಪಿಗೆ ಭಾರಿ ನಷ್ಟ ಅನುಭವಿಸಬೇಕಾಗುತ್ತದೆ ಎನ್ನುವ ಎಚ್ಚರಿಕೆ ಸಂದೇಶವನ್ನು ನೀಡಿದ್ದಾರೆ.

ಇನ್ನೊಂದೆಡೆ ಬಿಎಸ್ ಯಡಿಯೂರಪ್ಪ ಮತ್ತು ವಿಜಯೇಂದ್ರ ನಡೆ ಬಗ್ಗೆ ಸ್ವಪಕ್ಷದವರೇ ಟೀಕೆಗಳನ್ನ ಮಾಡುತ್ತಿದ್ದಾರೆ. ಅದರಲ್ಲೂ ಬಸನಗೌಡ ಪಾಟೀಲ್ ಯತ್ನಾಳ್, ಅಪ್ಪ ಮಕ್ಕಳು ಸೇರಿ ಲಿಂಗಾಯತರನ್ನ ಬಲಿ ಕೊಡುವ ಪ್ರಯತ್ನ ಮಾಡುತ್ತಿದ್ದಾರೆ ಎನ್ನುವ ಗಂಭೀರ ಆರೋಪ ಮಾಡಿದ್ದಾರೆ.

ಒಟ್ಟಾರೆಯಾಗಿ ಕೋಲಾರ ಲೋಕಸಭಾ ಕ್ಷೇತ್ರದ ಟಿಕೆಟ್ ಕೊಡದ ಹಿನ್ನೆಲೆಯಲ್ಲಿ ಜೆಡಿಎಸ್ ಈ ರೀತಿ ತನ್ನ ಅಸಮಾಧಾನವನ್ನು ದಾಖಲಿಸಿದೆ. ಒಂದೆಡೆ ಮಾಜಿ ಸಚಿವರಿಬ್ಬರ ಬ್ಲಾಕ್ ಮೇಲ್ ತಂತ್ರ, ಟಿಕೆಟ್ ವಂಚಿತರ ತಟಸ್ಥ ನೀತಿ, ಮೈತ್ರಿ ಪಕ್ಷದ ಅಪಸ್ವರ, ಸ್ವ ಪಕ್ಷದವರ ಟೀಕೆಯಿಂದ ಬಿಜೆಪಿಗೆ ಸಂಕಷ್ಟ ಎದುರಾಗಿದೆ. ಇದೆಲ್ಲವನ್ನ ಮೀರಿ ಬಿಜೆಪಿ ಚುನಾವಣೆ ಎದುರಿಸಬೇಕಾಗಿದೆ.

### ಜಾತ್ರಾ ಮಹೋತ್ಸವ ಪೂರ್ವಭಾವಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ನೆಮ್ಮದಿಯ ಬದುಕಿಗೆ ಸಾಮರಸ್ಯ ಮುಖ್ಯ


■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಬೆಟ್ಟದಷ್ಟು ಸಂಪತ್ತು ಇದ್ದರೂ ಮನಸ್ಸಿಗೆ ಶಾಂತಿ ಮುಖ್ಯ. ಸಾಮರಸ್ಯ ಬದುಕಿನಿಂದ ಜೀವನದಲ್ಲಿ ಶಾಚಿತಿ, ನೆಮ್ಮದಿ ಪ್ರಾಪ್ತವಾಗುವುದೆಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ಶ್ರೀ ರಂಭಾಪುರಿ ಪೀಠದಲ್ಲಿ ಜಾತ್ರಾ ಮಹೋತ್ಸವ ಪೂರ್ವಭಾವಿಯಾಗಿ ಜರುಗಿದ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭಾರತೀಯ ಸಂಸ್ಕೃತಿಯಲ್ಲಿ ಸಂಸ್ಕಾರ ಮತ್ತು ಧರ್ಮಾಚರಣೆಗೆ ಬಹಳಷ್ಟು ಪ್ರಾಮುಖ್ಯತೆ ಕೊಟ್ಟಿದೆ. ಭಾರತೀಯ ಉತ್ಕೃಷ್ಟ ಸಂಸ್ಕೃತಿಯ ಸಂವರ್ಧನೆಗೆ ಮಹಿಳೆಯರ ಕೊಡುಗೆ ಅಪಾರ. ಒಬ್ಬ ಮಹಿಳೆ ಸಂಸ್ಕಾರವಂತಳಾಗಿ ಬಾಳಿದರೆ ಇಡೀ ಕುಟುಂಬ ಸುಸಂಸ್ಕೃತವಾಗಿ ಬಾಳಲು ಸಾಧ್ಯವಾಗುತ್ತದೆ. ಆದರ್ಶ ಸಮಾಜ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ ಅತ್ಯಂತ ಜವಾಬ್ದಾರಿಯುತವಾದುದು. ತಾಯಿಯಾಗಿ, ಸಹೋದರಿಯಾಗಿ, ಸೊಸೆಯಾಗಿ ಮತ್ತು ಪತಿಗೆ ಸತಿಯಾಗಿ ವಿವಿಧ ಪಾತ್ರದಲ್ಲಿ ಶ್ರಮಿಸುತ್ತಿರುವುದನ್ನು ಮರೆಯಲಾಗದು ಎಂದರು.

ಇದೇ ಸಂದರ್ಭದಲ್ಲಿ ಆದರ್ಶ ಗೃಹಸ್ಥ ಜೀವನ ಹೊಂದಿ ಸಾರ್ಥಕ ಬದುಕನ್ನು ಕಟ್ಟಿಕೊಂಡ ಚಿಕ್ಕಮಗಳೂರಿನ ಎ.ಎಸ್. ಗುರುಕಾಂತಾರಾಧ್ಯ ದಂಪತಿಗಳಿಗೆ 'ಗುರು ಕಾರುಣ್ಯ ಸೇವಾ ಸಿಂಧು' ಪ್ರಶಸ್ತಿಯಿತ್ತು ಶಾಲು, ಸ್ಮರಣಿಕೆ, ಫಲ–ಪುಷ್ಪವಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು.



ಇದೇ ಸಂದರ್ಭದಲ್ಲಿ 15 ಜನ ಜಂಗಮ ವಟುಗಳಿಗೆ ಶಿವದೀಕ್ಷಾ ಅಯ್ಯಾಚಾರವನ್ನು ಬೇರುಗಂಡಿ ಬೃಹನ್ಮಠದ ರೇಣುಕ ಮಹಂತ ಶಿವಾಚಾರ್ಯ ಸ್ವಾಮಿಗಳು ಮಂತ್ರೋಪದೇಶ ಮಾಡಿದರು. ಹುಲಿಕೆರೆ ದೊಡ್ಡಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು, ಶಂಕರದೇವರ ಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು, ಬೀರೂರು ರಂಭಾಪುರಿ ಶಾಖಾ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಮತ್ತು ಬೇರುಗಂಡಿ ಬೃಹನ್ಮಠದ ರೇಣುಕ ಮಹಂತ ಶಿವಾಚಾರ್ಯ ಸ್ವಾಮಿಗಳು ವೀರಶೈವ ಧರ್ಮ, ಗುರು ಕೊಟ್ಟ ಸಂಸ್ಕಾರದ ಬಗೆಗೆ ಉಪದೇಶಾಮೃತವನ್ನಿತ್ತರು.

ಹಾಸನದ ವೇ.ದೇವರಾಜು ಶಾಸ್ತ್ರಿ ಮತ್ತು ತಂಡದವರಿಂದ ಪೂಜಾ ಕಾರ್ಯಗಳು ಜರುಗಿದವು.

ಬೆಂಗಳೂರಿನ ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾ ಸಂಸ್ಥೆಯ ಅಧ್ಯಕ್ಷ ಯು.ಎಂ. ಬಸವರಾಜ್, ಎ.ಎಸ್. ಶಿವಕಾಂತಾರಾಧ್ಯರು, ಅ.ಭಾ.ವೀ. ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಹೆಚ್.ಎಂ. ಲೋಕೇಶ್, ಚಿಕ್ಕಮಗಳೂರಿನ ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಸಮಿತಿ ಅಧ್ಯಕ್ಷ ವೀರಭದ್ರಯ್ಯನವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಚಿಕ್ಕಮಗಳೂರಿನ ಹಿರಿಯ ಪತ್ರಕರ್ತ ಪ್ರಭುಲಿಂಗ ಶಾಸ್ತ್ರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಇಂಜಿನಿಯರ್ ದಕ್ಷಿಣಾಮೂರ್ತಿ ಸರ್ವರನ್ನು ಸ್ವಾಗತಿಸಿದರು. ಶೈಲಾ ಬಸವರಾಜ ಮಹಿಳಾ ತಂಡದವರಿಂದ ಪ್ರಾರ್ಥನಾ ಗೀತೆ ಜರುಗಿತು. ಶ್ರೀಕಾಂತ ಚಿಕ್ಕಮಗಳೂರು ನಿರೂಪಿಸಿದರು.

ಒಂದು ಹೆಣ್ಣಿನಲ್ಲಿ ಆರು ಸದ್ಗುಣಗಳಿರಬೇಕೆಂದು ಧರ್ಮ ಶಾಸ್ತ್ರ ಹೇಳುತ್ತದೆ. ಕೆಲಸ ಕಾರ್ಯಗಳಲ್ಲಿ ದಾಸಿಯಾಗಿ, ಸಲಹೆ ಕೊಡುವಲ್ಲಿ ಮಂತ್ರಿಯಾಗಿ, ರೂಪದಲ್ಲಿ ಲಕ್ಷ್ಮಿಯಾಗಿ, ಕ್ಷಮೆಯಲ್ಲಿ ಭೂ ತಾಯಿಯಾಗಿ, ಊಟ ಮಾಡಿಸುವಾಗ ತಾಯಿಯಾಗಿ ಮತ್ತು ಸಂಸಾರಿಕ ಜೀವನದಲ್ಲಿ ಗಂಡನ ಇಚ್ಛೆಯಂತೆ ಬಾಳುವ ಸದ್ಗುಣಗಳಿದ್ದರೆ ಆ ಮನೆತನ ಬಹು ಬೇಗ ಎತ್ತರಕ್ಕೆ ಬೆಳೆಯಲು ಸಾಧ್ಯವಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಪುರುಷರಷ್ಟೇ ಮಹಿಳೆಯರಿಗೂ ಸಮಾನ ಧರ್ಮ ಪರಿಪಾಲಿಸುವ ಅವಕಾಶ ಕಲ್ಪಿಸಿಕೊಟ್ಟಿದ್ದನ್ನು ಮರೆಯಲಾಗದು ಎಂದು ರಂಭಾಪುರಿ ಶ್ರೀಗಳು ತಿಳಿಸಿದರು.

### ದುಗ್ಗಿ ಸುಕ್ಷೇತ್ರದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ

# ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ರಥೋತ್ಸವ

■ವಿಜಯಸಾಕ್ಷಿ ಸುದ್ದಿ, ಸೊರಬ

ತಾಲೂಕಿನ ದುಗ್ಗಿ ಸುಕ್ಷೇತ್ರದ ಶ್ರೀ ಗುರು ರೇವಣಸಿದ್ಧೇಶ್ವರ ಮಠದಲ್ಲಿ ಮಾ.30ರಂದು ಸಂಜೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ, ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ರಥೋತ್ಸವ, ಶ್ರೀ ಮಠದ 48ನೇ ವರ್ಷದ ವಾರ್ಷಿಕೋತ್ಸವ ಸಮಾರಂಭ ಜರುಗಲಿದೆ.

ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ದುಗ್ಗಿ–ಕಡೆನಂದಿಹಳ್ಳಿ ಕ್ಷೇತ್ರದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸುವರು. ಬೊಮ್ಮನಹಳ್ಳಿ ವಿರಕ್ತಮಠದ ಶಿವಯೋಗಿ ಸ್ವಾಮಿಗಳು, ಜಡೆ ಮಹಾಂತ ಸ್ವಾಮಿಗಳು, ಶಾಂತಪುರ ಶಿವಾನಂದ ಶಿವಾಚಾರ್ಯರು, ಸಿಂಧನೂರು–ಕನ್ನೂರು ಸೋಮನಾಥ ಶಿವಾಚಾರ್ಯರು, ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯರು, ಕಾರ್ಜುವಳ್ಳಿ ಸದಾಶಿವ ಶಿವಾಚಾರ್ಯರು, ಚನ್ನಗಿರಿ ಕೇದಾರ




ಶಿವಶಾಂತವೀರ ಶಿವಾಚಾರ್ಯರು, ಯಲಬುರ್ಗಾದ ಶಿವಲಿಂಗ ಸ್ವಾಮಿಗಳು ಉಪದೇಶಾಮೃತ ನೀಡುವರು.

ಬೆಳಿಗ್ಗೆ ಸ್ವಾಮಿಗಳವರ ಗದ್ದುಗೆಗೆ ಮಹಾರುದ್ರಾಭಿಷೇಕ, ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ಪಲ್ಲಕ್ಕಿ ಉತ್ಸವ ನಡೆಯುವುದು. ಇದೇ ಸಂದರ್ಭದಲ್ಲಿ ರೇವಣಸಿದ್ಧೇಶ್ವರ ಶಿವಾಚಾರ್ಯರ ಜನ್ಮ ವರ್ಧಂತ್ಯೋತ್ಸವ, ಸರ್ಪ ಶಾಂತಿ ಜರುಗುವುದು. ಸಂಜೆ ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ರಥೋತ್ಸವ ಜರುಗಲಿದೆ. ರಾತ್ರಿ ಸಂಗೀತ–ಭರತನಾಟ್ಯ, ವಿಶೇಷ ಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮಗಳು ನಡೆಯುತ್ತವೆ ಎಂದು ಶ್ರೀ ಮಠದ ಪ್ರಕಟಣೆ ತಿಳಿಸಿದೆ.

# ದೇವಸ್ಥಾನ ಪಕ್ಕದಲ್ಲಿ ಶಾದಿಮಹಲ್ ಬೇಡ: ಜಿಲ್ಲಾಧಿಕಾರಿಗಳಿಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜೋಡ ಮಾರುತಿ ದೇವಸ್ಥಾನದ ಪಕ್ಕದಲ್ಲಿ ಶಾದಿಮಹಲ್ ಕಟ್ಟಲು ಅವಕಾಶ ಕೊಡಬಾರದು ಎಂದು ಕ್ರಾಂತಿ ಸೇನಾ ಸಂಘಟನೆ ಬಾಬು ಬಾಕಳೆ ಅವರ ನೇತೃತ್ವದಲ್ಲಿ ನೂರಾರು ಹಿಂದೂ ಕಾರ್ಯಕರ್ತರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.



ಈ ಸಂದರ್ಭದಲ್ಲಿ ಬಾಬು ಬಾಕಳೆ ಮಾತನಾಡಿ, ಗದುಗಿನ ಹಿಂದೂ ಸಮಾಜ ಪೂಜಿಸುವಂತಹ ಶ್ರೀ ಜೋಡ ಮಾರುತಿ ದೇವಸ್ಥಾನದ ಪಕ್ಕದಲ್ಲಿ ಮುಸ್ಲಿಂ ಸಮಾಜದವರು ಶಾದಿಮಹಲ ಕಟ್ಟುತ್ತಿರುವುದು ಖಂಡನೀಯ. ಇದರಿಂದ ಕೋಮು ಸೌಹಾರ್ದತೆಗೆ ಧಕ್ಕೆ ಉಂಟಾಗಬಹುದಲ್ಲದೆ, ದೇವಸ್ಥಾನದ ಪವಿತ್ರತೆಗೂ ಭಂಗ ಬರಬಹುದು ಎಂದರು.

ಬಿಜೆಪಿ ಯುವ ಮುಖಂಡ ಸುಧೀರ್ ಕಾಟಿಗರ್, ರಾಣಿ ಚಂದಾವರ ಮಾತನಾಡಿ, ಗದಗ ನಗರದಲ್ಲಿ ಈ ಹಿಂದಿನಂತೆಯೇ ಕೋಮು ಸೌಹಾರ್ದತೆ ಕಾಪಾಡಿಕೊಳ್ಳುವ ಉದ್ದೇಶದಿಂದ ಈ ಕಟ್ಟಡ ನಿರ್ಮಾಣಕ್ಕೆ ಅವಕಾಶ ನೀಡಬಾರದು ಎಂದು ವಿನಂತಿಸಿದರು.

ಪದ್ಮಾ ಗುಜಲ್, ರೇಣುಕಾ ಕಬಾಡಿ, ಭೀಮಾ ಕಾಟಿಗರ್, ಭರತ್ ಮಾರಿಯಪ್ಪನವರ್, ಪ್ರವೀಣ್ ಹಬೀಬ್, ಪರಶುರಾಮ್ ಖಟವಟೆ, ವಿನೋದ್ ಬಾಂಡಗೆ, ಆನಂದ್ ಸರೋದೆ, ಶ್ರೀಕಾಂತ್ ಬಾಕಳೆ, ಸತೀಶ್ ಪೂಜಾರಿ, ರಾಮು, ಪವನ್ ಪುರದ, ಶಿವು ಕಂಬಾರ್ ಮುಂತಾದವರು ಪಾಲ್ಗೊಂಡಿದ್ದರು.

# ಜಾನಪದ ಅಕಾಡೆಮಿ ಸದಸ್ಯರಾಗಿ ಶಂಕರಣ್ಣ ಸಂಕಣ್ಣವರ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಡಿ ಬರುವ ಅಕಾಡೆಮಿಗಳಿಗೆ ಅಧ್ಯಕ್ಷರು ಹಾಗೂ ಸದಸ್ಯರನ್ನು ಇತ್ತೀಚೆಗೆ ನೇಮಕ ಮಾಡಲಾಗಿದ್ದು, ಗದಗ ಜಿಲ್ಲೆಯ ರೋಣ ತಾಲೂಕಿನ ಕೊತಬಳ ಗ್ರಾಮದ ಹಿರಿಯ ಜಾನಪದ ಕಲಾವಿದ ಶಂಕರಣ್ಣ ಸಂಕಣ್ಣವರ ಅವರನ್ನು ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರನ್ನಾಗಿ ಮೂರು ವರ್ಷಗಳ ಅವಧಿಗೆ ನೇಮಕ ಮಾಡಲಾಗಿದೆ.

ಜಾನಪದ ಅಕಾಡೆಮಿಯ ಸದಸ್ಯರಾಗಿ ನೇಮಕವಾದ ಶಂಕರಣ್ಣ ಸಂಕಣ್ಣವರನ್ನು ಜಿಲ್ಲೆಯ ಹಿರಿಯ ಕಲಾವಿದರಾದ ಅಶೋಕ ಬಣ್ಣದ, ಮೌನೇಶ ಸಿ.ಬಡಿಗೇರ, ಕಾವೆಂಶ್ರೀ, ಸಿಕೆಎಚ್ ಶಾಸ್ತ್ರೀ ಕಡಣಿ, ಶಿವು ಭಜಂತ್ರಿ, ಬಸವರಾಜ ಈರಣ್ಣವರ, ಬಸವರಾಜ ಹಡಗಲಿ, ಗಜಾನನ ವರ್ಣೇಕರ, ರಾಚಯ್ಯ ಹೊಸಮಠ, ವಿಶ್ವನಾಥ ಬೇಂದ್ರ, ಉಜ್ವಲ್ ಕಬಾಡಿ ಸೇರಿದಂತೆ ಕಲಾವಿದರು ಅಭಿನಂದಿಸಿದ್ದಾರೆ.


# ಕೊಳಗೇರಿ ಅಭಿವೃದ್ಧಿ ಮಂಡಳಿಯ ನಿರ್ದೇಶಕರಾಗಿ ರಾಮಕೃಷ್ಣ ರೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕೊಳಚೆ ಪ್ರದೇಶಗಳ ಅಭಿವೃದ್ಧಿ ಮತ್ತು ನಿರ್ಮೂಲನಾ ಮಂಡಳಿಗೆ ರಾಜ್ಯ ನಾಮನಿರ್ದೇಶಕರನ್ನಾಗಿ ಗದಗ ಜಿಲ್ಲೆಯ ಕಾಂಗ್ರೆಸ್ ಮುಖಂಡ, ಹುಲಕೋಟಿ ಗ್ರಾಮದ ರಾಮ್ಯಕೃಷ್ಣ ಎಸ್. ರೊಳ್ಳಿ ಅವರನ್ನು ನೇಮಕ ಮಾಡಿ ವಸತಿ ಇಲಾಖೆಯ ಅಧೀನ ಕಾರ್ಯದರ್ಶಿಗಳು ಆದೇಶ ಹೊರಡಿಸಿದ್ದಾರೆ.



# ಅಕ್ಬರಸಾಬ ಬಬರ್ಚಿರವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ನೂತನ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಅಕ್ಬರಸಾಬ ಬಬರ್ಚಿಯವರಿಗೆ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಮಿಕ ಘಟಕದ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಮಿಕ ಘಟಕದ ಪ್ರಧಾನ ಕಾರ್ಯದರ್ಶಿ ತೌಸೀಫ್ ಢಾಲಾಯತ, ಹಜರತ್ ಮಹಬೂಬ ಸುಬಾನಿ ಮುಸ್ಲಿಂ ಜಮಾತೆ, ರಿಯಾಜ್ ಢಾಲಾಯತ, ಯುನುಸ್, ಜಹಾಂಗೀರ ಮುಳುಗುಂದ, ಇರ್ಫಾನ್ ಬಬರ್ಚಿ ಸೇರಿದಂತೆ ಹಲವಾರು ಕಾರ್ಯಕರ್ತರು ಉಪಸ್ಥಿದ್ದರು.

# ಕದಳಿವನಮಠದ ವಾರ್ಷಿಕೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಕಳಸಾಪೂರ ರಸ್ತೆಯ ಕದಳಿವನಮಠದ 27ನೇ ವಾರ್ಷಿಕೋತ್ಸವ ಹಾಗೂ ಆದಿದೇವಾನಂದಗಿರಿ ಸ್ವಾಮಿಗಳ 4ನೇ ಪುಣ್ಯಾರಾಧನೆ ಹಾಗೂ ಸಮಾಧಿ ಮಂದಿರದ ಉದ್ಘಾಟನಾ ಸಮಾರಂಭದ ಕಾರ್ಯಕ್ರಮಗಳು ಮಾ. 19 ಹಾಗೂ 20ರಂದು ಜರುಗಲಿವೆ.

ಮಾ. 19ರಂದು ಮುಂಜಾನೆ 9.30 ಗಂಟೆಗೆ ಸತ್ಸಂಗ ಸಮ್ಮೇಳನದ ಸಾನಿಧ್ಯವನ್ನು ಗದಗ ಶಿವಾನಂದ ಮಠದ ಪೂಜ್ಯ ಜ.ಅಭಿನವ ಶಿವಾನಂದ ಮಹಾಸ್ವಾಮಿಗಳು, ಇಂಚಲದ ಜ.ಶಿವಾನಂದಭಾರತಿ ಮಹಾಸ್ವಾಮಿಗಳು, ಕನ್ನೇರಿಯ ಜ.ಅದೃಶ್ಯ ಕಾಡಸಿದ್ದೇಶ್ವರ ಮಹಾಸ್ವಾಮಿಗಳು, ಗದುಗಿನ ಜ.ಡಾ.ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ಕದಳಿವನಮಠದ ಮಾತೋಶ್ರೀ ಅಕ್ಕಮಹಾದೇವಿ ಉಪಸ್ಥಿತರಿರುವರು.

ಸಂಜೆ 4 ಗಂಟೆಗೆ ಮಹಿಳಾ ದಿನಾಚರಣೆಯ ಅಂಗವಾಗಿ ಮಹಿಳಾಗೋಷ್ಠಿ ನಡೆಯಲಿದ್ದು, ಮುಖ್ಯ ಅತಿಥಿಗಳಾಗಿ ಸಚಿವ ಎಚ್.ಕೆ. ಪಾಟೀಲ, ಗಣ್ಯರಾದ ವಿದ್ಯಾವತಿ ಗಡಗಿ, ಉಷಾ ದಾಸರ, ಶಿವಣ್ಣ ಮುಳಗುಂದ, ರಾಮಕೃಷ್ಣ ಪಾಂಡ್ರೆ, ಅಂದಾನಪ್ಪ ಹಡಪದ, ವಿರುಪಾಕ್ಷಪ್ಪ ಕೊಣ್ಣೂರ ಆಗಮಿಸುವರು. ಸಾಧಕರನ್ನು ಸನ್ಮಾನಿಸಲಾಗುವುದು ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

# ಸಂಗೊಳ್ಳಿ ರಾಯಣ್ಣ ಮೂರ್ತಿಗೆ ಕ್ಷೀರಾಭಿಷೇಕ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಮೂರ್ತಿಗೆ ಬಿಜೆಪಿ ಮುಖಂಡ ರಮೇಶ ಸಜ್ಜಗಾರ ಅವರ ನೇತೃತ್ವದಲ್ಲಿ ಕ್ಷೀರಾಭಿಷೇಕ ನಡೆಯಿತು.

ಈ ಸಂದರ್ಭದಲ್ಲಿ ರಮೇಶ ಸಜ್ಜಗಾರ ಮಾತನಾಡಿ, ದೇಶದ ಹೆಮ್ಮೆಯ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಕಳೆದ 10 ವರ್ಷಗಳಲ್ಲಿ ಮಾಡಿದ ಸಾಧನೆಯ ಮೂಲಕ ದೇಶದ ಜನರ ವಿಶ್ವಾಸ ಗಳಿಸಿದ್ದಾರೆ. ಭಾರತದ ಸರ್ವತೋಮುಖ ಅಭಿವೃದ್ಧಿಯೊಂದಿಗೆ ನರೇಂದ್ರ ಮೋದಿಯವರು ಈ ಬಾರಿ ದೇಶಾದ್ಯಾಂತ ಲೋಕಸಭೆ ಚುನಾವಣೆಯಲ್ಲಿ 400ಕ್ಕೂ ಅಧಿಕ ಸೀಟುಗಳ ಮೂಲಕ 3ನೇ ಬಾರಿ ಪ್ರಧಾನಮಂತ್ರಿಯಾಗಲಿದ್ದು, ಈ ಹಿನ್ನೆಲೆಯಲ್ಲಿ ಸಂಗೊಳ್ಳಿ ರಾಯಣ್ಣನಿಗೆ ಡೊಳ್ಳು ಮೇಳಗಳೊಂದಿಗೆ ಕ್ಷೀರಾಭಿಷೇಕ ಮಾಡಿ ಸಂಕಲ್ಪ ಮಾಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಹಾಲುಮತ ಸಮಾಜದ ಮುಖಂಡರಾದ ಶಿವು ಡಂಬಳ, ಅಶೋಕ ಕುಡತನಿ, ಉಡಚಪ್ಪ ಹಳ್ಳಿಕೇರಿ, ಶಶಿ ಕಳಸಾಪೂರ, ಶೆಟ್ಟರ, ಮಂಜುನಾಥ ಶಾಂತಗೇರಿ, ದೇವರಾಜ ಆಲೂರ, ವಿರೇಶ ಬೇವಿನಕಟ್ಟಿ, ವಿಜಯ ಸೋಳಂಕೆ, ಹನುಮಂತ ಹಳ್ಳೂರ, ಸೋಮು ಮೇಟಿ, ಮಂಜು ಗಂಗಾತ್ರಿ, ಮಾಂತು ಆಲೂರ, ಶಿವು ಜೋಗಿನ ಮುಂತಾದವರು ಉಪಸ್ಥಿತರಿದ್ದರು.

# ಬಸವಕೇಂದ್ರದಲ್ಲಿ ಶಿವಾನುಭವ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕಳಸಾಪೂರ ಗ್ರಾಮದ ಬಸವ ಕೇಂದ್ರದಲ್ಲಿ 1499ನೇ ಶಿವಾನುಭವ ನೆರವೇರಿತು. ಬಸವ ಕೇಂದ್ರದ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಖಂಡಮ್ಮನವರ ಮಾತನಾಡಿ, ಅಲ್ಲಮಪ್ರಭು ದೇವರು ತಮ್ಮ ವಚನವೊಂದರಲ್ಲಿ, ದೇವರು ಎಲ್ಲೋ ದೂರ ಇರುವುನೆಂದು ಭಾವಿಸಿರುತ್ತೇವೆ, ಅಷ್ಟೇ ಏಕೆ, ಅನೇಕರು ಅನೇಕ ವೃತ–ನಿಯಮಾದಿಗಳನ್ನು ಆಚರಿಸುತ್ತಾರೆ, ಇವನ್ನೆಲ್ಲಾ ಕೆಲವರು ಮೂಢತೆಯಿಂದ ಮಾಡಿದರೆ ಇನ್ನೂ ಕೆಲವರು ಕಾಟಾಚಾರಕ್ಕಾಗಿ ಮಾಡುವರು. ದೇವರನ್ನು ಕಾಣುವ ರೀತಿ ಇದಲ್ಲ. ಇನ್ನು ಕೆಲವರಿಗೆ ದೇವರ ಕಲ್ಪನೆಯೇ ಇರುವುದಿಲ್ಲ.




ಇಂಥವರಿಗೆ ನಾಸ್ತಿಕರೆನ್ನುತ್ತಾರೆ. ನಾವು ಸದಾ ಪರಿಶುದ್ಧ ಮನಸ್ಸಿನಿಂದ ಭಕ್ತಿ ಪೂರ್ವಕವಾಗಿ ದೇವನನ್ನು ನೆನೆದರೆ ಸಾಕು. ದೇವರನ್ನು ನಮ್ಮಲ್ಲಿಯೇ ಕಾಣಬಹುದು ಎಂದು ತಿಳಿಸಿದ್ದಾರೆ ಎಂದರು.

ವೇದಿಕೆಯ ಮೇಲೆ ಶಿಲ್ಪಾ ಖಂಡಮ್ಮನವರ, ಜಯಶ್ರೀ ಖಂಡಮ್ಮನವರ, ಅನಸೂಯಾ ಖಂಡಮ್ಮನವರ, ಮಕ್ಕಳು ಉಪಸ್ಥಿತರಿದ್ದರು. ಸಾಮೂಹಿಕ ಪ್ರಾರ್ಥನೆಯನ್ನು ಪ್ರಶಾಂತ ಬ.ಖಂಡಮ್ಮನವರ ನಿರ್ವಹಿಸಿದರು. ಸಂತೋಷ ನಾಯ್ಕರ ಸ್ವಾಗತಿಸಿ ನಿರೂಪಿಸಿದರು. ಕೊನೆಗೆ ವಚನ ಮಂಗಲಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯ ವಾಯಿತೆಂದು ಪ್ರಶಾಂತ ರಣತೂರ ತಿಳಿಸಿದ್ದಾರೆ.

**ಲೋಕಸಭೆ ಸಾರ್ವತ್ರಿಕ ಚುನಾವಣೆ-2024**

## ಮುಕ್ತ, ಶಾಂತಿಯುತ ಮತದಾನಕ್ಕಾಗಿ ಆಯುಧ ಠೇವಣಿ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭೆ ಸಾರ್ವತ್ರಿಕ ಚುನಾವಣೆ-2024 ಘೋಷಣೆಯಾಗಿದ್ದು, ಈ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಅಹಿತಕರ ಘಟನೆಗಳು ಸಂಭವಿಸದಂತೆ ಚುನಾವಣೆಯನ್ನು ಶಾಂತಿ, ಶಿಸ್ತು ಪಾಲನೆಯುತವಾಗಿ ಹಾಗೂ ಮುಕ್ತವಾಗಿ ಪೂರ್ಣಗೊಳಿಸಬೇಕಾಗಿರುವುದರಿಂದ ಗದಗ ಜಿಲ್ಲಾ ವ್ಯಾಪ್ತಿಯ ಎಲ್ಲ ಶಸ್ತ್ರ / ಆಯುಧ ಪರವಾನಿಗೆದಾರರು ಬಂದೂಕು ಪರವಾನಿಗೆ ಆಧಾರದಲ್ಲಿ ಹೊಂದಿರುವ ಎಲ್ಲ ರೀತಿಯ ಶಸ್ತ್ರ / ಬಂದೂಕುಗಳನ್ನು ಇಂದಿನಿಂದಲೇ ಜಾರಿಗೆ ಬರುವಂತೆ ತಮ್ಮ ವ್ಯಾಪ್ತಿಯ ಪ್ರದೇಶದ ಪೊಲೀಸ್ ಠಾಣೆಗಳಲ್ಲಿ ಅಥವಾ ಆಯುಧಗಳನ್ನು ಡಿಪಾಜಿಟ್ ಮಾಡಿಕೊಳ್ಳಲು ಅಧಿಕೃತವಾಗಿ ಪರವಾನಿಗೆಗಳನ್ನು ಹೊಂದಿರುವ ವಹಿವಾಟುದಾರರಲ್ಲಿ ಠೇವಣಿ ಇಡಬೇಕು.

ಗದಗ ಜಿಲ್ಲೆಯ ಚುನಾವಣಾ ಘೋಷಿತ ಯಾವುದೇ ಪ್ರದೇಶದಲ್ಲಿ ಹೊರಗಿನ ಅಥವಾ ಯಾವುದೇ ವ್ಯಕ್ತಿಗಳು ಶಸ್ತ್ರ/ ಬಂದೂಕು ಹಿಡಿದು-ಕೊಂಡು ತಿರುಗಾಡುವುದನ್ನು ಷರತ್ತುಗಳಿಗೆ ಒಳಪಟ್ಟು ನಿಷೇಧಿಸಿದೆ.

ಧಾರ್ಮಿಕ ಸಂಸ್ಥೆಗಳು, ಬ್ಯಾಂಕುಗಳು, ಸರ್ಕಾರಿ ಅರೆ ಸರ್ಕಾರಿ ಸಂಸ್ಥೆಗಳಲ್ಲಿ ಮತ್ತು ಸರ್ಕಾರೇತರ ಖಾಸಗಿ ಸಂಸ್ಥೆಗಳಲ್ಲಿ ಭದ್ರತೆಗಾಗಿ ಆಯುಧಗಳನ್ನು ಹೊಂದಿರುವವರು ಹಾಗೂ ವೈಯಕ್ತಿಕವಾಗಿ ಜೀವ ಬೆದರಿಕೆ ಹೊಂದಿರುವವರು ಆಯುಧಗಳನ್ನು ತಮ್ಮಲ್ಲಿಯೇ ಇಟ್ಟುಕೊಳ್ಳುವ ಅನಿವಾರ್ಯತೆ ಇದ್ದಲ್ಲಿ ಅಂತಹ ಶಸ್ತ್ರ ಪರವಾನಿಗೆದಾರರು ತಮ್ಮ ವ್ಯಾಪ್ತಿ ಪ್ರದೇಶದ ಪೊಲೀಸ್ ಠಾಣೆಗಳಲ್ಲಿ ಈ ಪ್ರಕಟಣೆ ಹೊರಡಿಸಿದ 7 ದಿನಗಳೊಳಗಾಗಿ ಸಕಾರಣಗಳೊಂದಿಗೆ ವೈಯಕ್ತಿಕವಾಗಿ ವಿನಾಯತಿ ಕೋರಿ ಅರ್ಜಿ ಸಲ್ಲಿಸತಕ್ಕದ್ದು. ಈ ಆದೇಶವು ಲೋಕಸಭೆ ಸಾರ್ವತ್ರಿಕ ಚುನಾವಣಾ ಪ್ರಕ್ರಿಯೆ ಮುಕ್ತಾಯಗೊಳ್ಳುವವರೆಗೆ ಜಾರಿಯಲ್ಲಿರುತ್ತದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ವೈಶಾಲಿ ಎಂ.ಎಲ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಗುರುಮಾತೆ ಡಿ.ಎಫ್. ಪಾಟೀಲರ ಸೇವಾ ನಿವೃತ್ತಿಯ ಪ್ರಯುಕ್ತ ಅಭಿನಂದನಾ ಸಮಾರಂಭ**

# ಗುರು ಎಂದರೆ ಬೆಳಕು, ಅರಿವು, ಜ್ಞಾನ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗುರು ಎಂದರೆ ಬೆಳಕು, ಅರಿವು, ಜ್ಞಾನ. ನಮ್ಮ ದೇಶದಲ್ಲಿ ಶಿಕ್ಷಕರಿಗೆ ಅಪಾರ ಗೌರವವಿದೆ. ಅದಕ್ಕಾಗಿ ಶಿಕ್ಷಕರು ಸಮಾಜದ ಜ್ಞಾನದ ಹರಿಕಾರರು ಎನ್ನಬಹುದಾಗಿದೆ ಎಂದು ಕಪ್ಪತ್ತಗಿರಿ ನಂದಿವೇರಿಮಠದ ಶ್ರೀ ಶಿವಕುಮಾರ ಮಹಾಸ್ವಾಮಿಗಳು ನುಡಿದರು.

ಅವರು ಪಟ್ಟಣದ ಶ್ರೀ ಶಂಕರಭಾರತಿ ಸಮುಧಾಯಭವನದಲ್ಲಿ ರವಿವಾರ ಸಾಹಿತಿ ಹಾಗೂ ತಾಲೂಕಿನ ಉಂಡೆನಹಳ್ಳಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯೆ ಡಿ.ಎಫ್. ಪಾಟೀಲರ ಸೇವಾ ನಿವೃತ್ತಿ ಹೊಂದಿದ ಪ್ರಯುಕ್ತ ಅವರ ಶಿಷ್ಯಬಳಗ, ಅಭಿಮಾನಿಗಳು ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದ ಪಾವನ ಸಾನಿಧ್ಯ ವಹಿಸಿ ಮಾತನಾಡಿದರು.

ಇಂದು ಕೆಲಸ ಮಾಡಿದ್ದರ ಬೆಳಕು ಸಮಾಜದ ಮೇಲೆ ಬೀಳುತ್ತದೆ. ಅಂತಹ ಮಾದರಿ ವೃತ್ತಿಯಲ್ಲಿ ಸುಮಾರು 38 ವರ್ಷಗಳ ಕಾಲ ಪ್ರಾಮಾಣಿಕವಾಗಿ, ನೇರ ನಡೆನುಡಿಯಿಂದ ತಮ್ಮ ವೃತ್ತಿಗೆ ನ್ಯಾಯಯುತವಾಗಿ ನಡೆದುಕೊಂಡಿರುವ



ಡಿ.ಎಫ್. ಪಾಟೀಲರ ಸೇವೆ ಮತ್ತೊಬ್ಬರಿಗೆ ಮಾದರಿಯಾಗಿದೆ. ಅವರ ನಿವೃತ್ತ ಜೀವನ ಸದಾ ಕಾಲ ನೆಮ್ಮದಿಯಿಂದ ಕೂಡಿರಲಿ ಎಂದು ಹಾರೈಸಿದರು.

ಸಮಾರಂಭವನ್ನು ಉದ್ಘಾಟಿಸಿದ ಗದಗ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಮತ್ತು ಅಧ್ಯಕ್ಷತೆ ವಹಿಸಿದ್ದ ಹಾನಗಲ್ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ಸಾಲಿಮಠ ಮಾತನಾಡಿ, ನಾವು ಗಳಿಸಿದ ಆಸ್ತಿ, ಅಂತಸ್ತು, ಸಂಪತ್ತು ಯಾವುದೂ ಕೊನೆಯವರೆಗೂ ಉಳಿಯದು. ಆದರೆ, ಕಲಿತ ವಿದ್ಯೆ ಮಾತ್ರ ಕೊನೆಯವರೆಗೂ ಜತೆಗಿರುತ್ತದೆ. ಜೀವನದಲ್ಲಿ ಗುರಿ, ಛಲ, ಗುರುವಿನ ಆಶೀರ್ವಾದ ಇದ್ದರೆ ಮಾತ್ರವೇ ವಿದ್ಯೆ ಕಲಿತು ಸಮಾಜದಲ್ಲಿ ಉನ್ನತ ಸ್ಥಾನ ಗಳಿಸಲು ಸಾಧ್ಯ. ಈ ನಿಟ್ಟಿನಲ್ಲಿ ತಮ್ಮ ಸೇವಾವದಿಯಲ್ಲಿ ಸಾವಿರಾರು ಮಕ್ಕಳನ್ನು ಉನ್ನತ ಹುದ್ದೆಗೇರುವಂತೆ ಮಾಡಿದ ಕೀರ್ತಿ ಡಿ.ಎಫ್. ಪಾಟೀಲರಿಗೆ ಸಲ್ಲುತ್ತದೆ ಎಂದು ಹೇಳಿದರು.

ಸಭೆಯಲ್ಲಿ ಮುಖ್ಯ ಅತಿಥಿಗಳಾಗಿ ಆರ್.ಎನ್. ಪಾಟೀಲ, ಲಲಿತಾ ಕೆರಿಮನಿ, ಎನ್.ಡಿ. ಕಗ್ಗಲಗೌಡ್ರ, ವೀರಣ್ಣ ಅಳ್ಳಳ್ಳಿ, ಡಿ.ಎಚ್. ಪಾಟೀಲ, ಬಿ.ಎಸ್. ಹರ್ಲಾಪೂರ, ಮಲ್ಲಿಕಾರ್ಜುನ ಕಳಸಾಪೂರ, ಬಿ.ಪಿ. ಪಟ್ಟಣಶೆಟ್ಟಿ, ಕೆ.ಎ. ಬಳಿಗೇರ, ಕೆ.ಎಸ್. ಕೊಡ್ಲಿವಾಡ, ವಿ.ಬಿ. ದನದಮನಿ, ಸೌಮಶ್ರೀ, ರವಿಶಂಕರ ಕಳ್ಳಿಗುಡ್ಡ, ಸಚಿನ್ ಕೊಡ್ಲಿವಾಡ ಹಾಗೂ ಶಿಷ್ಯಬಳಗ, ಗುರುವೃಂದ, ಅಭಿಮಾನಿಬಳಗ ಸೇರಿದಂತೆ ಅನೇಕರಿದ್ದರು. ಕೆ.ಎಸ್. ಕೊಡ್ಲಿವಾಡ ಸ್ವಾಗತಿಸಿದರು. ಈಶ್ವರ ಮೇಡ್ಲೇರಿ ನಿರೂಪಿಸಿದರು. ವಿಭಾ ಸಚಿನ್ ವಂದಿಸಿದರು.

> ಶಿಕ್ಷಕರಾದವರು ಹೆಮ್ಮೆ ಪಡಬೇಕು. ಯಾಕೆಂದರೆ, ಇದು ನಿಮ್ಮ ಹಿರಿಯರ ಪುಣ್ಯ ಕಾರಣವಾಗಿದೆ. ಶಿಕ್ಷಕರಾದವರಲ್ಲಿ ವೃತ್ತಿಗೆ ಬದ್ಧರಾಗಿ, ಆತ್ಮಸಾಕ್ಷಿಯಾಗಿ ದುಡಿಯುವ ಬದ್ಧತೆ, ಶಿಕ್ಷಕರು ಎಲ್ಲಿ ಹೋಗಬೇಕು, ಎಲ್ಲಿ ಹೋಗಬಾರದು ಅಲ್ಲಿ ಹೋಗಲೆ ಬಾರದು ಎನ್ನುವ ಶುದ್ಧತೆ ಹಾಗೂ ಮಕ್ಕಳಿಗೆ ಪಾಠ ಮಾಡುವಲ್ಲಿ ಅವಶ್ಯಕ ಸಿದ್ಧತೆ ಇರಬೇಕು. ಅದಕ್ಕಾಗಿ ಶಿಕ್ಷಕರಲ್ಲಿ ಬದ್ಧತೆ, ಶುದ್ಧತೆ ಹಾಗೂ ಸಿದ್ಧತೆ ಅವಶ್ಯ. ಈ ಸಂಸ್ಕಾರ ಎಲ್ಲರಲ್ಲಿ ಬರಬೇಕು. ಅಂತಹ ಸೃಜನಶೀಲ ಕೆಲಸ ದೊರಕಿರುವದಕ್ಕೆ ಶಿಕ್ಷಕರಾದವರು ಹೆಮ್ಮೆ ಪಡಬೇಕು ಎಂದು ಶ್ರೀ ಶಿವಕುಮಾರ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

**ಅಕ್ಷರ ಟೆಕ್ನೋ ಶಾಲೆಯಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ**

# ಪ್ರಗತಿಯ ಹಾದಿಗೆ ಮಹಿಳೆಯೇ ಬುನಾದಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆ ತನ್ನ ಕುಟುಂಬ ನಿರ್ವಹಣೆಯೊಂದಿಗೆ ಸರ್ವ ಕ್ಷೇತ್ರದಲ್ಲಿಯೂ ಯಶಸ್ಸು ಸಾಧಿಸುತ್ತಾ ಮುನ್ನುಗ್ಗುತ್ತಿರುವುದು ಹೆಮ್ಮೆಯ ವಿಷಯ. ಮಹಿಳೆಯರಲ್ಲಿ ತಾಳ್ಮೆ, ಪ್ರೀತಿ, ಮಮತೆ, ವಾತ್ಸಲ್ಯ ಈ ಎಲ್ಲ ಗುಣಗಳಿಂದ ಶ್ರೇಷ್ಠತೆಯನ್ನು ಹೊಂದಿರುತ್ತಾಳೆ. ಆದ್ದರಿಂದ ಮಾನವ ಕುಲದ ಅಭಿವೃದ್ಧಿಗೆ ಮಹಿಳೆಯ ಪಾತ್ರ ಅಪಾರವೆಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಚಾರ್ಯ ಬಿ.ಎಲ್. ಬಾರಟಕ್ಕೆ ಅಭಿಪ್ರಾಯ ವ್ಯಕ್ತಪಡಿಸಿದರು.

ಗದಗ ಶಹರ ವಲಯದ ಅಕ್ಷರ ಟೆಕ್ನೋ ಶಾಲೆಯಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕೆಲಸದ ಒತ್ತಡದ ನಡುವೆಯೂ



ಮಹಿಳೆಯು ತಾಳ್ಮೆಯಿಂದ ಕುಟುಂಬ ನಿರ್ವಹಣೆಯೊಂದಿಗೆ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ, ರಾಜಕೀಯ, ಧಾರ್ಮಿಕ, ಔದ್ಯೋಗಿಕ ಹೀಗೆ ಹಲವಾರು ಕ್ಷೇತ್ರಗಳಲ್ಲಿ ಗಣನೀಯ ಸಾಧನೆಯನ್ನು ಮಾಡಿರುವುದು ಶ್ಲಾಘನೀಯ ಎಂದರು.

ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಪ್ರಕಾಶ ಮಂಗಳೂರು ಮಾತನಾಡಿ, ಮಹಿಳೆ ಕುಟುಂಬದ ಕಣ್ಣು, ಕೌಟುಂಬಿಕ, ಆರ್ಥಿಕ ವ್ಯವಸ್ಥೆಯಲ್ಲಿ ಬಿಗಿಯಾದ ಹಿಡಿತದೊಂದಿಗೆ ಮಕ್ಕಳಿಗೆ ಆಪ್ತ ಸ್ನೇಹಿತೆಯಾಗಿ ಸಾಮಾಜಿಕ ಮೌಲ್ಯಗಳನ್ನು ಹಾಗೂ ಮಾನವೀಯ ಮೌಲ್ಯಗಳನ್ನು ತಿಳಿದು ಪೂಜ್ಯನೀಯ ಸ್ಥಾನವನ್ನು ನೀಡಿ, ಪ್ರತಿದಿನ ಗೌರವಿಸಬೇಕಿದೆ ಎಂದರು.

ಸಂಸ್ಥೆಯ ಅಧ್ಯಕ್ಷ ವಿಜಯಕುಮಾರ ಹಾಲಮಠ ಮಾತನಾಡಿ, ಶಾಲೆಯು 7 ವರ್ಷಗಳಿಂದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಹಾಗೂ ಮಾನವೀಯ ಮೌಲ್ಯಗಳ ಕುರಿತು ಶಿಕ್ಷಣವನ್ನು ನೀಡುತ್ತಾ ಗದಗ ಶಹರ ವಲಯದಲ್ಲಿ ಒಂದು ಅತ್ಯುತ್ತಮ ಶಾಲೆಯೆಂದು ಗುರುತಿಸಿಕೊಂಡಿದೆ. ಇದಕ್ಕೆಲ್ಲಾ ಕಾರಣ ನಮ್ಮ ಶಾಲೆಯಲ್ಲಿ ಸೇವೆಗೈಯುತ್ತಿರುವ ಎಲ್ಲ ಶಿಕ್ಷಕಿಯರು. ಮಹಿಳೆಯರು ಮನಸ್ಸು ಮಾಡಿದರೆ, ಎಂಥಹ ಕಠಿಣ ಕೆಲಸವನ್ನಾದರೂ ಮಾಡಬಲ್ಲರೆಂಬುದಕ್ಕೆ ನಮ್ಮ ಶಾಲೆಯೇ ಸಾಕ್ಷಿ ಎಂದರು.

ವೇದಿಕೆಯ ಮೇಲೆ ಸಂಸ್ಥೆಯ ಪಾಲುದಾರರಾದ ಧನಲಕ್ಷ್ಮೀ ಹಾಲಮಠ ಹಾಗೂ ಮುಖ್ಯೋಪಾಧ್ಯಾಯೆ ಜ್ಯೋತಿ ಕರಾವಿ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಡಯಟ್ ಪ್ರಾಚಾರ್ಯರಿಗೆ ಹಾಗೂ ಶ್ರೀ ಪುಟ್ಟರಾಜ ಶ್ರೀ ಸದ್ಭಾವನಾ ಪ್ರಶಸ್ತಿ ಪಡೆದ ಪ್ರಕಾಶ ಮಂಗಳೂರು ಅವರಿಗೆ ಶಾಲೆಯ ಪರವಾಗಿ ಸನ್ಮಾನಿಸಲಾಯಿತು. ಜ್ಯೋತಿ ಕರಾವಿ ಸ್ವಾಗತಿಸಿದರು. ಬೇಬಿಜಾನ ನದಾಫ ನಿರೂಪಿಸಿದರು. ವನಜಾಕ್ಷಿ ಹಿರೇಮಠ ವಂದಿಸಿದರು.

**ಕೊಪ್ಪಳ, ಹಾವೇರಿ ಲೋಕಸಭಾ ಚುನಾವಣೆಗೆ ಸ್ಪರ್ಧೆ ಖಚಿತ**

# ರಾಣಿ ಚೆನ್ನಮ್ಮ ಪಾರ್ಟಿ ಕಣಕ್ಕೆ




■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆಗೆ ಕೊಪ್ಪಳ ಹಾಗೂ ಹಾವೇರಿ ಮತಕ್ಷೇತ್ರಕ್ಕೆ ರಾಣಿ ಚೆನ್ನಮ್ಮ ಪಾರ್ಟಿಯ ಅರ್ಹ ಅಭ್ಯರ್ಥಿಗಳು ಸ್ಪರ್ಧಿಸಿ ಪ್ರಬಲ ಸ್ಪರ್ಧೆ ನೀಡಲಿದ್ದಾರೆ ಎಂದು ರಾಣಿ ಚೆನ್ನಮ್ಮ ಪಾರ್ಟಿ ಪ್ರಾದೇಶಿಕ ಪಕ್ಷದ ಸಂಸ್ಥಾಪಕ ಎಂ.ಬಿ. ದೇಸಾಯಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಬ್ರಿಟಿಷರ ಆಧೀನದಲ್ಲಿದ್ದ ಭಾರತವನ್ನು ಸ್ವತಂತ್ರಗೊಳಿಸಲು ಹೋರಾಟ ನಡೆಸಿದವರಲ್ಲಿ ವೀರರಾಣಿ ಕಿತ್ತೂರ ಚೆನ್ನಮ್ಮ ಅಗ್ರಗಣ್ಯ ವೀರಮಹಿಳೆ. ಪ್ರಪ್ರಥಮ ಸ್ವಾತಂತ್ರ್ಯ ಕಹಳೆ ಊದಿದ ದಿಟ್ಟ ಸಾಹಸಿ ಮಹಿಳೆ ವೀರಶೈವ ಲಿಂಗಾಯತ ಸಮುದಾಯದಲ್ಲಿ ಜನಿಸಿದ ವೀರರಾಣಿ ಕಿತ್ತೂರ ಚೆನ್ನಮ್ಮಳ ಸಾಹಸಗಾಥೆ ಬಹುದೊಡ್ಡದು. ಇಂತಹ ತಾಯಿಯ ಹೆಸರಿನಲ್ಲಿ ಸ್ಥಾಪಿತವಾದ ಜಾತ್ಯಾತೀತ ಪ್ರಾದೇಶಿಕ ರಾಜಕೀಯ ಪಕ್ಷವಾದ ರಾಣಿ ಚೆನ್ನಮ್ಮ ಪಾರ್ಟಿ ಈ ಚುನಾವಣೆಗೆ ಯೋಗ್ಯ ಅಭ್ಯರ್ಥಿಗಳನ್ನು ಕಣಕ್ಕಿಳಿಸಲಿದೆ ಎಂದಿದ್ದಾರೆ.

ಲೋಕಸಭಾ ಕ್ಷೇತ್ರಗಳಾದ ಹಾವೇರಿ, ಕೊಪ್ಪಳ, ಬಿಜಾಪೂರ, ಬಾಗಲಕೋಟಿ, ಬೀದರ, ಗುಲಬರ್ಗಾ, ಧಾರವಾಡ, ಬೆಳಗಾವಿ, ಚಿಕ್ಕೋಡಿ ಕ್ಷೇತ್ರದಲ್ಲಿ ರಾಣಿ ಚೆನ್ನಮ್ಮ ಪಾರ್ಟಿಯ ಅಭ್ಯರ್ಥಿಗಳನ್ನು ಕಣಕ್ಕಿಳಿಸಲಿದ್ದು ಆಯಾ ಕ್ಷೇತ್ರದ ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ಗಣ್ಯರು, ಮುಖಂಡರು ಸೂಚಿಸುವ ಅರ್ಹ ಅಭ್ಯರ್ಥಿಗಳಿಗೆ ಬಿಫಾರ್ಮ ನೀಡಲು ಪಾರ್ಟಿ ನಿರ್ಧರಿಸಿದೆ.

ಈ ಹಿಂದೆ ಚುನಾವಣೆಗೆ ಸ್ಪರ್ಧಿಸಿ ಕೆಲವೇ ಮತಗಳ ಅಂತರದಿಂದ ಪರಾಭವ ಗೊಂಡಿರುವ, ರಾಷ್ಟ್ರೀಯ/ ಪಕ್ಷೇತ್ತರ ಅಭ್ಯರ್ಥಿಗಳಿಗೂ ಬಿಫಾರ್ಮ ನೀಡಲು ಪಾರ್ಟಿ ಚಿಂತನೆ ನಡೆಸಿದೆ ಎಂದು ಎಂ.ಬಿ. ದೇಸಾಯಿ ತಿಳಿಸಿದ್ದಾರೆ.

ರಾಣಿ ಚೆನ್ನಮ್ಮ ಪಾರ್ಟಿಯ ತತ್ವ-ಸಿದ್ಧಾಂತಗಳನ್ನು ಪಾಲಿಸುವ, ಚುನಾವಣೆಗೆ ಸ್ಪರ್ಧಿಸಲಿಚ್ಛಿಸುವ ಯೋಗ್ಯ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ-9980383723/ 7483792645 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

# ಶಾಲಾಭಿವೃದ್ಧಿಯಲ್ಲಿ ಎಸ್‌ಡಿಎಂಸಿ ಪಾತ್ರ ಮಹತ್ವದ್ದು

■ವಿಜಯಸಾಕ್ಷಿ ಸುದ್ದಿ, ಗದಗ

ಶಾಲಾಭಿವೃದ್ಧಿ ಮತ್ತು ಮಕ್ಕಳ ಶೈಕ್ಷಣಿಕ ಪ್ರಗತಿಯಲ್ಲಿ ಶಾಲಾ ಮೇಲುಸ್ತುವಾರಿ ಸಮಿತಿಯ ಪಾತ್ರ ಮಹತ್ವದ್ದಾಗಿದೆ ಎಂದು ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್ ಹೇಳಿದರು.


ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಅಡವಿಸೋಮಾಪೂರ ಸಣ್ಣ ತಾಂಡೆ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಶಾಲಾ ಮೇಲುಸ್ತುವಾರಿ ಸಮಿತಿಯ ಸಭೆಯಲ್ಲಿ ಅವರು ಮಾತನಾಡಿ, ಶಾಲಾ ಮೂಲ ಸೌಕರ್ಯ ಹೆಚ್ಚಿಸುವುದು, ಅನಿಯಮಿತ ಗೈರು ಹಾಜರಿ, ಶಾಲೆ ಬಿಟ್ಟ ಮಕ್ಕಳನ್ನು ಪುನಃ ಶಾಲೆಗೆ ಕರೆತರುವ ಪ್ರಯತ್ನ ಮಾಡುವುದು, ಮಕ್ಕಳ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ



ಎಸ್‌ಡಿಎಂಸಿ ಹಾಗೂ ಸಮುದಾಯದ ಜವಾಬ್ದಾರಿ ಮಹತ್ವದ್ದಾಗಿದೆ ಎಂದರು.

ಶಿಕ್ಷಕರಾದ ಎಸ್.ಜಿ. ಅಮ್ಮಿನಭಾವಿ, ಎಸ್‌ಡಿಎಂಸಿ ಕಾರ್ಯ ವಿಧಾನಗಳ ಬಗ್ಗೆ ಮಾಹಿತಿ ನೀಡಿದರು. ಎಸ್.ಟಿ. ಹಳಕಟ್ಟಿ, ಪಿ.ಬಿ. ಕಿಲಬನವರ, ಶಾಲಾ ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಮಾರುತಿ ಪವಾರ, ಗ್ರಾ.ಪಂ ಸದಸ್ಯ ವೆಂಕಟೇಶ್ ಲಮಾಣಿ, ಲಚ್ಚಪ್ಪ ಲಮಾಣಿ, ಸೋಮನಾಥ ಲಮಾಣಿ, ಮೌನೇಶ್ ಲಮಾಣಿ, ಬಿಸಿಯೂಟ ಸಿಬ್ಬಂದಿಗಳಾದ ಗಂಗವ್ವ ಲಮಾಣಿ, ಸಾವಿತ್ರಿ ರಾಠೋಡ, ದೇವಕ್ಕ ಲಮಾಣಿ, ಲಕ್ಷ್ಮೀ ಲಮಾಣಿ, ಮೀರವ್ವ ಪವಾರ, ಶಾಂತವ್ವ ರಾಠೋಡ, ರೇಣುಕಾ ಲಮಾಣಿ, ಗೀತಾ ರಾಠೋಡ, ಶಾಲಾ ಮಕ್ಕಳು ಇದ್ದರು.

# ಪುರಸಭೆಯಿಂದ ಫ್ಲೆಕ್ಸ್, ಬ್ಯಾನರ್ ತೆರವು




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯ ಚುನಾವಣಾ ಆಯೋಗ ಚುನಾವಣಾ ನೀತಿ ಸಂಹಿತೆ ಜಾರಿಗೊಳಿಸಿದ್ದರಿಂದ ಪಟ್ಟಣದಲ್ಲಿ ಶನಿವಾರ ಫ್ಲೆಕ್ಸ್, ಬ್ಯಾನರ್, ಧ್ವಜ, ಗೋಡೆ ಬರಹ ಹಾಗೂ ಅನಧಿಕೃತ ಜಾಹಿರಾತು ಫ್ಲೆಕ್ಸ್‌ಗಳ ತೆರವು ಕಾರ್ಯಾಚರಣೆಯನ್ನು ಮುಖ್ಯಾಧಿಕಾರಿ ಮಹೇಶ ಹಡಪದ ಅವರ ನೇತೃತ್ವದಲ್ಲಿ ನಡೆಸಲಾಯಿತು.

ಪಟ್ಟಣದ ಹಲವೆಡೆ ಪುರಸಭೆಯವರ ಜೆಸಿಬಿ ಮುಖಾಂತರ ಪಕ್ಷದ ಧ್ವಜ ಹಾಗೂ ಬ್ಯಾನರ್‌ಗಳನ್ನು ಮನೆಗಳ ಮೇಲೆ, ಸಾರ್ವಜನಿಕ ಸ್ಥಳಗಳಲ್ಲಿ ಹಾಗೂ ದೀಪದ ಕಂಬಗಳಿಗೆ, ಮರದ ಟೊಂಗೆಗಳಿಗೆ ಕಟ್ಟಿದ್ದ ಧ್ವಜಗಳನ್ನು ತೆರವುಗೊಳಿಸುವ ಕಾರ್ಯಾಚರಣೆ ರವಿವಾರದವರೆಗೂ ಮುಂದುವರೆದಿತ್ತು. ಪುರಸಭೆ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್ ಸೇರಿದಂತೆ ಅನೇಕರು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

# ಕುರಡಗಿಯಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಕುರಡಗಿ ಗ್ರಾಮ ಪಂಚಾಯಿತಿ, ಸಂಜೀವಿನಿ ಮಹಿಳಾ ಒಕ್ಕೂಟದ ಸಹಯೋಗದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ, ವಿವಿಧ ಆಟೋಟ ಸ್ಪಧೆಗಳು ಕಪ್ಪತ್ತ ಮಲ್ಲೇಶ್ವರ ಸಾಂಸ್ಕೃತಿಕ ಭವನದಲ್ಲಿ ನಡೆದವು.

ಪಂಚಾಯತಿ ಅಭಿವೃದ್ಧಿ ಅಧಿಕಾರಿ ಶಿಲ್ಪಾ ಕವಲೂರ ಪ್ರಾಸ್ತಾವಿಕವಾಗಿ ಮಾತನಾಡಿ, ಗ್ರಾಮೀಣ ಮಹಿಳೆಯರ ಆರ್ಥಿಕ ಮಟ್ಟ ಸುಧಾರಣೆಗಾಗಿ ರಾಜ್ಯ ಸರ್ಕಾರಗಳು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಮಹಿಳೆಯರು ಈ ಯೋಜನೆಯ ಸದುಪಯೋಗಪಡಿಸಿಕೊಂಡು ಮುನ್ನಡೆಯಬೇಕು. ತಮ್ಮ ಮಕ್ಕಳಿಗೆ ಗ್ರಾಮೀಣ ಕಲೆ, ಕೃಷಿ, ಪರಿಸರದ ಬಗ್ಗೆ ತಿಳಿಹೇಳಬೇಕು, ಗ್ರಾಮೀಣ ಭಾಗದ ಸಂಸ್ಕೃತಿಯನ್ನು ಪರಿಚಯಿಸುವ ನಿಟ್ಟಿನಲ್ಲಿ ಮಹಿಳೆಯರು ಮುಂದಾಗಬೇಕು



ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಸಂಜೀವಿನಿ ಮಹಿಳಾ ಒಕ್ಕೂಟದ ಅಧ್ಯಕ್ಷೆ ಯಶೋಧಾ ಅಮರಗೋಳ ಮಾತನಾಡಿ, ಪ್ರಸಕ್ತ ಕಾಲಘಟ್ಟದಲ್ಲಿ ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಗುರುತಿಸಿಕೊಳ್ಳುತ್ತಿದ್ದಾರೆ. ಮಹಿಳೆ ಮನಸ್ಸು ಮಾಡಿದರೆ ಎಲ್ಲವನ್ನೂ ಸಾಧಿಸಬಲ್ಲಳು ಎಂಬುದಕ್ಕೆ ದೇಶದ ಸಾಧಕರ ಸಾಲಿನಲ್ಲಿ ಅನೇಕ ಮಹಿಳೆಯರಿದ್ದಾರೆ ಎಂದರು.

ಸಂಜೀವಿನಿ ಮಹಿಳಾ ಒಕ್ಕೂಟದ ವತಿಯಿಂದ ಪಿ.ಡಿ.ಓ ಶಿಲ್ಪಾ ಕವಲೂರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಸಂಗೀತ ಕುರ್ಚಿ, 100 ಮೀ ಓಟ ಮುಂತಾದ ಸ್ಪರ್ಧೆಗಳು ನಡೆದವು. ಸಂಯೋಜಕಿ ವಿದ್ಯಾ ಪರಡ್ಡಿ ಮಾತನಾಡಿದರು. ಎನ್‌ಆರ್‌ಎಲ್‌ಎಂ ತಾಲೂಕಾ ಒಕ್ಕೂಟದ ಗವಿಸಿದ್ದಪ್ಪ, ಗ್ರಾ.ಪಂ ಸದಸ್ಯೆಯರಾದ ಗೀತಾ ಹಾಲವರ, ಪವಿತ್ರ ಕುರಿಯವರ, ಒಕ್ಕೂಟದ ಕಾರ್ಯದರ್ಶಿ ಮಂಜುಳಾ ಡಂಬಳ, ಮುಖ್ಯ ಪುಸ್ತಕ ಬರಹಗಾರ್ತಿ ಮಮತಾ ನದಾಫ್, ಸುಜಾತಾ ಸವಡಿ, ಕೃಷಿ, ಪಶು ಸಖಿಯರಾದ ಚೈತ್ರಾ ಅಯ್ಯನಗೌಡ್ರ, ಬಸಮ್ಮ ಅಯ್ಯನಗೌಡ್ರ, ಆಶಾ ಕಾರ್ಯಕರ್ತರಾದ ಲಲಿತಾ ಚೋಳನಗೌಡ್ರ, ನೂರಜಾನ ನದಾಫ್, ಅಂಗನವಾಡಿ ಕಾರ್ಯಕರ್ತೆಯರಾದ ತಿಪ್ಪವ್ವ ಜಲ್ಲಿಗೇರಿ, ಭುವನೇಶ್ವರಿ ಪಾಟೀಲ ಉಪಸ್ಥಿತರಿದ್ದರು.

ನೀಲಮ್ಮ ಮಾರನಬಸರಿ ಮಹಿಳೆಯರಿಗೆ ತರಬೇತಿ ನೀಡಿದರು. ಶಹಾಬುದ್ದೀನ್ ನರೇಗಲ್ಲ ರಿಲಾಯನ್ಸ್ ಫೌಂಡೇಶನ್ ಸಂಸ್ಥೆಯ ವತಿಯಿಂದ ಅನೇಕ ಮಹಿಳೆಯರನ್ನು ಸನ್ಮಾನಿಸಿದರು. ಗ್ರಾ.ಪಂ ಸದಸ್ಯ ಶೌಕತಅಲಿ ನದಾಫ್ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

**ಹನಿಗವನ**

### ಪರದಾಟ

ಶೆಟ್ಟರು
ಬಿಜೆಪಿ ಬಿಟ್ಟರು।
ಕಾಂಗ್ರೆಸ್ ಕೈ
ಹಿಡಿದರು।
ಅಲ್ಲಿಯೂ ಕೈ
ಕೊಟ್ಟರು।
ಈಗ ಎಲ್ಲಿಯೂ
ಟಿಕೆಟ್ ಸಿಗದೇ
ಅಲ್ಲಿಲ್ಲಿ ಓಡಾಡಿ
ಕೆಟ್ಟರು!!!!

- ಎಚ್.ಆರ್. ವಸ್ತ್ರದ್, ಧಾರವಾಡ

## ನಿಧನ ವಾರ್ತೆ

### ಬೂದವ್ವ ಫಕ್ಕಿರಪ್ಪ ಅಕ್ಕಿ



ಗದಗ: ತಾಲೂಕಿನ ಹೊಸಹಳ್ಳಿ ಗ್ರಾಮದ ನಿವಾಸಿ ಬೂದವ್ವ ಫಕ್ಕೀರಪ್ಪ ಅಕ್ಕಿ (85) ಭಾನುವಾರ ನಿಧನರಾದರು. ಮೃತರು ಪುತ್ರ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ 1 ಗಂಟೆಗೆ ಹೊಸಹಳ್ಳಿ ಗ್ರಾಮದ ರುದ್ರಭೂಮಿಯಲ್ಲಿ ನೆರವೇರಿತು.

## ಆದರಹಳ್ಳಿಯಲ್ಲಿ ಗವಿ ಸಿದ್ದೇಶ್ವರನ ಜಾತ್ರೆ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಕಪ್ಪತ್ತಗಿರಿಯ ಸೆರಗಿನಲ್ಲಿರುವ ಆದ್ರಳ್ಳಿ ಗ್ರಾಮದ ಪೂರ್ವ ದಿಕ್ಕಿನಲ್ಲಿರುವ ಗುಡ್ಡವು ಅತ್ಯಂತ ಅದ್ಭುತ, ವಿಸ್ಮಯಕಾರಿಯಾಗಿದೆ. ಈ ಗುಡ್ಡವು ಸಾಹಸಿಗರನ್ನು ಕೈ ಬೀಸಿ ಕರೆಯುತ್ತಿದ್ದು, ಅದ್ಭುತ ವಿಸ್ಮಯ ಲೋಕವನ್ನು ತನ್ನಲ್ಲಿ ಅಡಗಿಸಿಕೊಂಡಿದೆ. ಲಕ್ಷ್ಮೇಶ್ವರದಿಂದ ಕೇವಲ 15 ಕಿ.ಮೀ ಅಂತರದಲ್ಲಿರುವ ಗವಿಗುಡ್ಡ ಈ ಭಾಗದ ಪ್ರೇಕ್ಷಣೀಯ ತಾಣವಾಗಿದೆ.

ಭೂಮಿಯಿಂದ 250 ಅಡಿ ಎತ್ತರವಿರುವ ಗುಡ್ಡದಲ್ಲಿನ ಬೃಹತ್ ಏಕಶಿಲೆಯಲ್ಲಿ ಇರುವ ಗವಿಸಿದ್ದೇಶ್ವರ ದೇವಸ್ಥಾನವು ಇಲ್ಲಿನ ವಿಶೇಷ. ಗುಡ್ಡದ ಮೇಲೆ ವಿಭಿನ್ನ ಆಕಾರದ ಶಿಲಾಕೌತುಕಗಳನ್ನು ಕಾಣಬಹುದು. ಒಂದು ಬೃಹತ್ ಬಂಡೆ ಅಂಗೈ ಅಗಲದ ಕಲ್ಲಿನ ಮೇಲೆ ನಿಂತಿರುವುದು, ಹಾವಿನ ಹೆಡೆಯಾಕಾರದ ಬೃಹತ್ ಶಿಲೆ, ಛತ್ರಿ ಆಕಾರದ ಬಂಡೆ, ಬಂಡೆಯಲ್ಲಿ ಶಿವ ತಪಗೈವ ದೃಶ್ಯ ಭಕ್ತರನ್ನು ಪುಳಕಿತಗೊಳಿಸುತ್ತದೆ. ಇತ್ತೀಚಿನ ದಿನಗಳಲ್ಲಿ ಇಲ್ಲಿನ ಸಂಪೂರ್ಣ ಜವಾಬ್ದಾರಿಯನ್ನು ತೆಗೆದುಕೊಂಡು ಅದರ ಅಭಿವೃದ್ಧಿಗೆ ಸದಾ ಶ್ರಮಿಸುತ್ತಿರುವ ಶ್ರೀ ಕುಮಾರ ಮಹಾರಾಜರು ಇಂದು ಈ ಅದ್ಭುತವನ್ನು ಮತ್ತಷ್ಟು ಬೆಳಗಿಸುತ್ತಿದ್ದಾರೆ.

ಇಂತಹ ವೈಶಿಷ್ಟಪೂರ್ಣವಾದ ಆದರಹಳ್ಳಿ ಗ್ರಾಮದ ಗವಿಸಿದ್ಧೇಶ್ವರನ ಜಾತ್ರಾ ಮಹೋತ್ಸವ ಮಾ.18ಕ್ಕೆ ಪ್ರಾರಂಭವಾಗಿದ್ದು, ಮಾ.20ರವರೆಗೆ ವಿಜೃಂಭಣೆಯಿಂದ ಜರುಗಲಿದೆ. ಮಾ.18ರಂದು ರೊಟ್ಟಿ ಜಾತ್ರಾ ಮಹೋತ್ಸವ, ನಂತರ ಸಹಸ್ರ ಮಹಿಳೆಯರಿಗೆ ಉಡಿತುಂಬುವ ಕಾರ್ಯಕ್ರಮ, ರಾತ್ರಿ ಧಾರ್ಮಿಕ ಸಭೆ, ಪೂಜ್ಯರುಗಳ ಆಶೀರ್ವಚನ ಕಾರ್ಯಕ್ರಮಗಳು ಸಂಪನ್ನಗೊಂಡವು.

ಮಾ.19ರಂದು ಮಧ್ಯಾಹ್ನ 12 ಗಂಟೆಗೆ ಪೂಜ್ಯ ಮೌನತಪಸ್ವಿ ಶ್ವೇತಶಾಂತ ಶ್ರೀ ಜಡೆಯ ಶಾಂತಲಿಂಗೇಶ್ವರ ಮಹಾಸ್ವಾಮಿಗಳವರ ಪಲ್ಲಕ್ಕಿ ಉತ್ಸವ, ಸಂಜೆ 5 ಗಂಟೆಗೆ ಮಹಾರಥೋತ್ಸವ, ಸಂಜೆ 7 ಗಂಟೆಗೆ ಧರ್ಮ ಸಭೆ, ಮಾ.20ರ ಸಂಜೆ 5ಕ್ಕೆ ಕಡುಬಿನ ಕಾಳಗ ಜರುಗಲಿದೆ ಎಂದು ಮಹಾನ್ ತಪಸ್ವಿ ಕುಮಾರ ಮಹಾರಾಜರು ತಿಳಿಸಿದ್ದಾರೆ.

### ಆಧ್ಯಾತ್ಮ ವಿದ್ಯಾಶ್ರಮದ 'ಮಹಿಳಾ ದಿನಾಚರಣೆ' ಕಾರ್ಯಕ್ರಮದಲ್ಲಿ ಡಾ. ನೀಲಮ್ಮತಾಯಿ ಅಸುಂಡಿ

# ಮಹಿಳೆ ಪ್ರತಿಯೊಬ್ಬರ ಬದುಕಿನ ದಿವ್ಯ ಶಕ್ತಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಮಹಿಳೆ ಇಂದು ಎಲ್ಲಾ ಕ್ಷೇತ್ರದಲ್ಲಿ ತನ್ನ ಛಾಪನ್ನು ಮೂಡಿಸಿ, ಸ್ತ್ರೀ ಅಬಲೆಯಲ್ಲ ಸಬಲೆ ಎನ್ನುವುದನ್ನು ಸಾಬೀತುಪಡಿಸಿದ್ದಾಳೆ. ಇಂದಿನ ಯುವ ಜನಾಂಗದ, ಒಂದು ಕುಟುಂಬದ, ಸಮಾಜದ ಬಹುದೊಡ್ಡ ಶಕ್ತಿಯಾಗಿ ಮಹಿಳೆಯ ಪಾತ್ರ ಹಿರಿದಾಗಿದೆ. ಮೌಲ್ಯಗಳು ಕುಸಿದು ಹೋಗುತ್ತಿರುವ ಇಂದಿನ ಸಂದರ್ಭದಲ್ಲಿ ಮನೆಯೇ ಮೊದಲ ಪಾಠಶಾಲೆ ತಾಯಿಯೇ ಮೊದಲ ಗುರುವಾಗಿ ಪ್ರತಿಯೊಬ್ಬರ ಬದುಕಿನ ದಿವ್ಯ ಶಕ್ತಿಯಾಗಿ, ಮಕ್ಕಳಿಗೆ ಸಂಸ್ಕಾರವನ್ನು ನೀಡುವಲ್ಲಿ ತಾಯಿಯ ಜವಾಬ್ದಾರಿ ಮುಖ್ಯವಾಗುತ್ತದೆ. ಮಹಿಳಾ ದಿನಾಚರಣೆಯ ಈ ಸಂದರ್ಭದಲ್ಲಿ ಮಹಿಳೆ ತನ್ನನ್ನು ತಾನು ಆತ್ಮವಿಮರ್ಶೆ ಮಾಡಿಕೊಂಡು ತನ್ನ ಪಾತ್ರವನ್ನು ಸರಿಯಾಗಿ ನಿಭಾಯಿಸುವ ದಿಟ್ಟತನ ತೋರಬೇಕು ಎಂದು ಶಿವಶರಣೆ ಡಾ. ನೀಲಮ್ಮತಾಯಿ ಅಸುಂಡಿ ಅಭಿಪ್ರಾಯಪಟ್ಟರು.

ಅವರು ಇಲ್ಲಿನ ಆದಿಶಕ್ತಿ ನಗರದ ಆಧ್ಯಾತ್ಮ ವಿದ್ಯಾಶ್ರಮದಲ್ಲಿ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ಆಶೀರ್ವಚನ ನೀಡಿದರು.

ಉಪನ್ಯಾಸ ನೀಡಿದ ಎಫ್.ಎಂ. ಡಬಾಲಿ ಪಿಯು ಕಾಲೇಜಿನ ಉಪನ್ಯಾಸಕಿ ಸುಧಾ ಹುಚ್ಚಣ್ಣವರ ಮಾತನಾಡಿ, ಮಹಿಳೆ ಇಂದು ಬಹು ಆಯಾಮಗಳಲ್ಲಿ ತನ್ನನ್ನು ತಾನು ಗುರುತಿಸಿಕೊಂಡಿದ್ದಾಳೆ. ಜೊತೆಗೆ ಮನೆ ಬೆಳಗುವ ನಂದಾದೀಪವಾಗಿ, ಸಮಾಜದ ಅಂಕುಡೊಂಕುಗಳನ್ನು ತಿದ್ದಿ ತೀಡುವ ಮಹಾ ಶಿಕ್ಷಕಿಯಾಗಿ, ಬದುಕಿಗೆ ಮಾರ್ಗ ತೋರುವ ಮಾರ್ಗದರ್ಶಿಯಾಗಿದ್ದಾಳೆ ಎನ್ನುವುದು ಎಷ್ಟು ಸತ್ಯವೋ, ಅಷ್ಟೇ ದೌರ್ಜನ್ಯಗಳು ಇಂದಿಗೂ ಮಹಿಳೆಯ ಮೇಲೆ ಆಗುತ್ತಿರುವುದು ಬೂದಿ ಮುಚ್ಚಿದ ಕೆಂಡದಂತೆ ಮುಂದುವರಿಯುತ್ತಲೇ ಸಾಗಿದೆ.

ಕೆಲವು ನಕಾರಾತ್ಮಕ ಮನಸ್ಥಿತಿಗಳು ಮಹಿಳೆಯನ್ನು ಎಲ್ಲೋ ಒಂದು ಕಡೆ ಕುಗ್ಗಿಸುವ ಕುತಂತ್ರವನ್ನು ಸಹ ನಡೆಸಿರುವುದು ಇಂದಿನ ಸಮಾಜಕ್ಕೆ ಹಿಡಿದ ಕೈಗನ್ನಡಿಯಾಗಿದೆ. ಇದೆಲ್ಲವನ್ನರಿತು ಇಂದಿನ ಎಲ್ಲಾ ಮಹಿಳಾ ಸಮುದಾಯ ಮನೋಧೈರ್ಯದಿಂದ, ಪ್ರಜ್ಞಾವಂತಿಕೆಯ ದಿಟ್ಟತನದಿಂದ ಮುಂದುವರಿಯುವುದು ಎಲ್ಲ ಮಹಿಳೆಯರಿಗೆ ಇಂದು ಅತ್ಯವಶ್ಯಕವಾಗಿದೆ ಎಂದರು.




> ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷರಾದ ವಿ.ಎಂ. ಹಿರೇಮಠ ಮಾತನಾಡಿ, ಒಬ್ಬ ಮಗಳಾಗಿ, ಸಹೋದರಿಯಾಗಿ, ಹೆಂಡತಿಯಾಗಿ, ತಾಯಿಯಾಗಿ, ಶಿಕ್ಷಕಿಯಾಗಿ ಹೀಗೆ ಹಲವು ಪಾತ್ರಗಳನ್ನು ನಿಭಾಯಿಸುವ ಸ್ತ್ರೀ ಪ್ರತಿಯೊಬ್ಬರ ಬದುಕಿನಲ್ಲಿ ಸ್ಫೂರ್ತಿದಾಯಕಿಯಾಗಿದ್ದಾಳೆ. ಮಹಿಳಾ ಸಮಾನತೆಯನ್ನು ಕಾಯ್ದುಕೊಂಡು ಹೋಗುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.


ಉದ್ಘಾಟಕರಾಗಿ ಆಗಮಿಸಿದ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಮಾತನಾಡಿ, ಮಹಿಳಾ ದಿನದ ಈ ಸಂದರ್ಭದಲ್ಲಿ ಪ್ರತಿಯೊಬ್ಬ ಮಹಿಳೆಯನ್ನು ಗೌರವಿಸುವುದು ಸುಸಂಸ್ಕೃತ ಸಮಾಜದ ಲಕ್ಷಣವಾಗಿದೆ. ಪ್ರತಿಯೊಬ್ಬ ಯಶಸ್ವಿ ಪುರುಷನ ಹಿಂದೆ ಒಬ್ಬ ಮಹಿಳೆ ಇರುತ್ತಾಳೆ ಎನ್ನುವುದನ್ನು ಸದಾ ನಾವು ಗಮನಿಸಬೇಕು ಎಂದರು.

ಆಶ್ರಮದ ಸಾಧಕಿ ಶರಣೆ ಮೈತ್ರಾದೇವಿ ಅಮ್ಮನವರು ಮಾತನಾಡುತ್ತಾ, ಇಂದು ಶಿಕ್ಷಣದಲ್ಲಿ ಮಕ್ಕಳಿಗೆ ನೀತಿ ಕಥೆಗಳನ್ನು ಬೋಧನೆ ಮಾಡುವ ಮೂಲಕ ಪಠ್ಯದ ಜೊತೆಗೆ ನೈತಿಕ ಮೌಲ್ಯಗಳನ್ನು ಸಹ ಬೆಳೆಸುವುದು ಅವಶ್ಯವಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಪ್ರಾಥಮಿಕ ಶಿಕ್ಷಕರ ಸಂಘದ ಗ್ರಾಮೀಣ ವಿಭಾಗದ ಅಧ್ಯಕ್ಷ ಎಸ್.ಆರ್. ಬಂಡಿ, ಕಾರ್ಯದರ್ಶಿ ಕೆ.ಬಿ. ಕೊಣ್ಣೂರ್ ಆಗಮಿಸಿದ್ದರು. ರಾಷ್ಟ್ರಪ್ರಶಸ್ತಿ ವಿಜೇತ ನಿವೃತ್ತ ಶಿಕ್ಷಕಿ ಶಾರದಾ ಕಾತರಕಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಘಟನಾ ಕಾರ್ಯದರ್ಶಿ ಬಿ.ಬಿ. ಹರ್ತಿ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕಿಯರ ಬಳಗದಿಂದ ವಚನ ನೃತ್ಯ ಕಾರ್ಯಕ್ರಮ ನೆರವೇರಿತು.

ಶೋಭಾ ಪಾಟೀಲ್ ಸ್ವಾಗತಿಸಿದರು. ಶೈಲಜಾ ಗುಂಜಳ್ ವಂದಿಸಿದರು. ಕಾರ್ಯಕ್ರಮದಲ್ಲಿ ಸಾಧಕ ಶಿಕ್ಷಕಿಯರನ್ನು ಸನ್ಮಾನಿಸಲಾಯಿತು. ಎನ್.ಎಚ್. ಪಾಟೀಲ್, ಎಸ್.ಎಸ್. ಲಕ್ಷಕೊಪ್ಪ, ಪಿ.ಬಿ. ಮುಧೋಳ್‌ಮಠ, ಎಂ.ಬಿ. ಪರ್ವತಗೌಡ, ವಸಂತ್ ಕಲಕಂಬಿ, ಜಿ.ಎಸ್. ಗೌಡರ್, ಎಸ್.ಜಿ. ಗೌಡ, ಶಿಲ್ಪಾ ಗುಡಗೇರಿ, ಎನ್.ಆರ್. ಹೂಗಾರ್ ಹಾಗೂ ತಾಲೂಕಿನ ಎಲ್ಲ ಶಿಕ್ಷಕರು, ಅಧ್ಯಾತ್ಮ ವಿದ್ಯಾಶ್ರಮದ ಆದಿಶಕ್ತಿ ಬಳಗದ ಸರ್ವ ಸದಸ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಮಾದಿಗ ಸಮಾಜವನ್ನು ಕಡೆಗಣಿಸದಿರಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಮಾದಿಗ ಸಮಾಜದ ಮುಖಂಡರಾದ ವಿಜಯ ಮಲ್ಲೇಶ ಕಲ್ಮನಿ, ಮಾರ್ತಂಡಪ್ಪ ಹಾದಿಮನಿ ಇವರನ್ನು ನಿಗಮ ಮಂಡಳಿಗೆ ನೇಮಕ ಮಾಡಿ ಸ್ಥಾನಮಾನ ನೀಡುವಂತೆ ಉಡಚಪ್ಪ ಹಳ್ಳಿಕೇರಿ, ಅಶೋಕ ಹಾದಿಮನಿ ಸೇರಿದಂತೆ ಮಾದಿಗ ಸಮಾಜದ ಹಿರಿಯರು, ಯುವಕರು ಸಚಿವರಾದ ಹೆಚ್.ಕೆ. ಪಾಟೀಲರನ್ನು ಭೇಟಿಯಾಗಿ ಮಾದಿಗ ಮಹಾಸಭಾ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಮನವಿ ಸಲ್ಲಿಸಿ ಒತ್ತಾಯಿಸಿದರು.

ರಾಜ್ಯ ಸಂಚಾಲಕ ಉಡಚಪ್ಪ ಹಳ್ಳಿಕೇರಿ ಮಾತನಾಡಿ, ಗದಗ ಜಿಲ್ಲೆಯಲ್ಲಿ ಸಾಕಷ್ಟು ಜನಸಂಖ್ಯೆಯನ್ನು ಹೊಂದಿರುವ ಈ ಸಮಾಜ ಇದುವರೆಗೆ ಕಾಂಗ್ರೆಸ್ ಪಕ್ಷವನ್ನೇ ನಂಬಿ ಬೆಂಬಲಿಸುತ್ತಿದೆ. ಇದುವರೆಗೆ ನಮ್ಮ ಸಮಾಜಕ್ಕೆ ಯಾವುದೇ ತರಹದ ಸ್ಥಾನವನ್ನು ಕಲ್ಪಿಸಿಕೊಡುವಲ್ಲಿ ಸರ್ಕಾರಗಳು ವಿಫಲವಾಗಿವೆ.

ಮುಂದೆ ಬರುವ ಲೋಕಸಭಾ ಚುನಾವಣೆಯಲ್ಲಿ ನಮ್ಮ ಸಮಾಜವು ಇನ್ನೂ ಹುಮ್ಮಸ್ಸಿನಿಂದ, ಹುರುಪಿನಿಂದ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಲಿದ್ದು, ನಿಗಮ ಮಂಡಳಿ ಅಥವಾ ಇನ್ನಾವುದು ಹುದ್ದೆ ನೀಡಿ ಈ ಸಮಾಜಕ್ಕೆ ಋಣಿಯಾಗಿ ಎಂದು ಮನವಿ ಮಾಡಿಕೊಂಡರು.

ಮನವಿ ಸ್ವೀಕರಿಸಿದ ಸಚಿವ ಡಾ. ಎಚ್.ಕೆ. ಪಾಟೀಲ, ಮಾದಿಗ ಸಮುದಾಯದ ಮುಖಂಡರಿಗೆ ನಿಗಮ, ಮಂಡಳಿಯಲ್ಲಿ ಸ್ಥಾನ-ಮಾನ ಕೊಡುವುದಾಗಿ ಭರವಸೆ ನೀಡಿದರು.

## ವಾರ್ಷಿಕೋತ್ಸವ ಅಂಗವಾಗಿ ಕ್ರೀಡಾಕೂಟ

**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಸಿದ್ಧಲಿಂಗ ನಗರದ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ 15ನೇ ವಾರ್ಷಿಕೋತ್ಸವದ ಅಂಗವಾಗಿ ಸದಸ್ಯರಿಗಾಗಿ ಮಾ. 24ರಂದು ಸಿದ್ಧಲಿಂಗ ನಗರದಲ್ಲಿನ ಬಸವ ಪ್ರಭೆ ಆವರಣ (ಕ್ಯಾಂಪಸ್)ದಲ್ಲಿ ಕ್ರೀಡಾಕೂಟ ಆಯೋಜಿಸಿದ್ದಾರೆ.

ಕ್ರೀಡಾಕೂಟದಲ್ಲಿ ವೇಗದ ನಡಿಗೆ, ಲಗೋರಿ ಸ್ಟ್ಯಾಂಡ್ ಬೀಳಿಸುವುದು, ಯೋಗಾಸನ, ಯೋಗ ಆಶುಭಾಷಣ (ಯೋಗ ಪಿಕ್ ಆ್ಯಂಡ್ ಸ್ಪೀಚ್) ಪುಠಾಣಿ-ಕಡ್ಲಿ ಬೇಳೆ ಬೇರ್ಪಡಿಸುವದು ಹೀಗೆ ಒಟ್ಟು 5 ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಈ 5 ಸ್ಪರ್ಧೆಗಳಲ್ಲಿ ಸ್ಪರ್ಧಿಯು ತಮಗಿಷ್ಟವಾದ 3 ಸ್ಪರ್ಧೆಗಳಲ್ಲಿ ಭಾಗವಹಿಸಬಹುದು. ವಿಜೇತರಿಗೆ ಪ್ರಶಸ್ತಿ ಪತ್ರ, ಬಹುಮಾನ ಮತ್ತು ಭಾಗವಹಿಸಿದವರಿಗೆಲ್ಲರಿಗೂ ಪ್ರಮಣ ಪತ್ರಗಳನ್ನು ನೀಡಲಾಗುವುದು. ಪ್ರವೇಶ ಉಚಿತವಾಗಿದೆ.

ಭಾಗವಹಿಸಲಿಚ್ಛಿಸುವವರು ಮಾ.23ರ ಸಂಜೆ 6 ಗಂಟೆಯೊಳಗಾಗಿ ಖುದ್ದಾಗಿ ಇಲ್ಲವೆ ಫೋನ್ /ವಾಟ್ಸಾಪ್ ಮೂಲಕ ಕ್ರೀಡಾಕೂಟದ ಸಂಯೋಜಕರಾದ ವಿಜಯಾ ಚನ್ನಶೆಟ್ಟಿ ಇವರಲ್ಲಿ ಹೆಸರು ನೋಂದಾಯಿಸಿಕೊಳ್ಳಬೇಕು. ತಡವಾಗಿ ಹೆಸರು ನೊಂದಾಯಿಸಿದವರಿಗೆ ಪ್ರವೇಶ ಇರುವುದಿಲ್ಲ.

ಹೆಚ್ಚಿನ ಮಾಹಿತಿ ಮತ್ತು ಹೆಸರು ನೋದಾಯಿಸಿಕೊಳ್ಳಲು ದೂರವಾಣಿ ಸಂಖ್ಯೆ-9481928404ಕ್ಕೆ ಸಂಪರ್ಕಿಸಬಹುದು. ಆಸಕ್ತ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸ್ಪರ್ಧೆಗಳನ್ನು ಯಶಸ್ವಿಗೊಳಿಸಲು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ಜಯಶ್ರೀ ವಸ್ತ್ರದ ತಿಳಿಸಿದ್ದಾರೆ.

## ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಅಕ್ಬರ್‌ಸಾಬ ಬಬರ್ಚಿ ನೇಮಕ



**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಹಿರಿಯ ಮುಸ್ಲಿಂ ಮುಖಂಡ, ಹಳೆ ಕಬ್ಬಿಣದ ವರ್ತಕರಾಗಿರುವ ಅಕ್ಬರ್‌ಸಾಬ ಬಬರ್ಚಿಯವರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಿರುವ ರಾಜ್ಯ ಸರ್ಕಾರದ ಕ್ರಮ ಸ್ವಾಗತಾರ್ಹ. ಇವರ ಅಧಿಕಾರಾವಧಿಯಲ್ಲಿ ಗದಗ-ಬೆಟಗೇರಿ ಅವಳಿ ನಗರ ಗಮನಾರ್ಹ ಬದಲಾವಣೆ ಆಗಲಿ ಎಂದು ಗದಗ ಜಿಲ್ಲಾ ಹಳೆ ಕಬ್ಬಿಣದ ವರ್ತಕರ ಸಂಘದ ಪ್ರಧಾನ ಕಾರ್ಯದರ್ಶಿ ಬಸವರಾಜ ಜಕ್ಕಪ್ಪನವರ ಸೇರಿದಂತೆ ಸಂಘದ ಪದಾಧಿಕಾರಿಗಳು, ಮುಖಂಡರು ಶುಭ ಕೋರಿದರು.

ಗದಗ-ಬೆಟಗೇರಿ ನಗರಾಭಿವೃದ್ಧಿ ಕಾರ್ಯಾಲಯದಲ್ಲಿ ಅಕ್ಬರ್‌ಸಾಬ ಬಬರ್ಚಿಯವರನ್ನು ಸನ್ಮಾನಿಸಿ ಮಾತನಾಡಿದ ಬಸವರಾಜ ಜಕ್ಕಪ್ಪನವರ, ನಗರದ ಸ್ವಚ್ಛತೆಯಲ್ಲಿ ಗುಜರಿ ಅಂಗಡಿಯವರ ಪಾತ್ರ ಮಹತ್ವದ್ದಾಗಿದೆ.

ಒಂದೇ ಸಾಲಿನಡಿ ಗುಜರಿ ವರ್ತಕರಿಗೆ ಮಳಿಗೆಗಳನ್ನು ನಗರಸಭೆ ವಶಪಡಿಸಿಕೊಂಡಿರುವ ವಕಾರ ಸಾಲಗಳಲ್ಲಿ ನಿರ್ಮಾಣ ಮಾಡಿ ಅನುಕೂಲ ಕಲ್ಪಿಸಲು ಬಬರ್ಚಿಯವರು ಶ್ರಮಿಸುತ್ತಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಂಘದ ಮುಖಂಡರಾದ ನಾರಾಯಣ ಯಲ್ಲಪ್ಪ ದೊಡ್ಮನಿ, ಉಮೇಶ ಕದಡಿ, ವಜೀರಸಾಬ ನದಾಫ, ಅನಿಲ ಟಿ.ಇರಕಲ್ಲ, ಸಮೀರ ನದಾಫ, ಪರಶುರಾಮ ಎಚ್. ಕಟ್ಟಿಮನಿ, ಧರ್ಮಪ್ಪ ವೀರಪ್ಪ ಹೊಸಮನಿ, ಅಬ್ದುಲ್ ಅಜೀಜ ನರಗುಂದ, ಮುರಳಿ ಇಲಕಲ್ಲ, ಪೀರಸಾಬ ನದಾಫ, ಸಲೀಂ ಬಬರ್ಚಿ, ರಮೇಶ ಕಾಗಿ, ಚಾಂದಸಾಬ ಬೋದ್ಲೇಖಾನ, ಜಗದೀಶ ಪಲ್ಲೇದ, ಸುರೇಶ ಮ್ಯಾದಾರ, ದೀಪಕ ಇಲಕಲ್ಲ, ಪ್ರವೀಣ ಕಮತರ ಉಪಸ್ಥಿತರಿದ್ದರು.



**■ ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿ ವತಿಯಿಂದ ನಗರದ ಡಿ.ಸಿ. ಪೌಟೆ ಕಾಲೇಜಿನಲ್ಲಿ ಯುವ ಮತದಾರರ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ವಿ.ಪ ಸದಸ್ಯರಾದ ಎಸ್.ವ್ಹಿ. ಸಂಕನೂರ, ಕೆ.ಎಸ್. ನವೀನ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಪ್ರಮುಖರಾದ ಎಂ.ಎಸ್. ಕರೀಗೌಡ್ರ, ಅನಿಲ ಅಬ್ಬಿಗೇರಿ, ಶಶಿಧರ ದಿಂಡೂರ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ, ಕಾಲೇಜಿನ ಯುವ ಮತದಾರರು ಉಪಸ್ಥಿತರಿದ್ದರು.

## ಗ್ಯಾರಂಟಿ ಸಮಿತಿಯ ಅಧ್ಯಕ್ಷರಾಗಿ ಶರಣಪ್ಪ ಬೆಟಗೇರಿ

**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಯ ಗಜೇಂದ್ರಗಡ ತಾಲೂಕಾ ಸಮಿತಿಯ ಅಧ್ಯಕ್ಷರನ್ನಾಗಿ ಸಮೀಪದ ಹಾಲಕೆರೆ ಗ್ರಾಮದ ಶರಣಪ್ಪ ಬೆಟಗೇರಿ ಅವರನ್ನು ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲರು ನೇಮಕಗೊಳಿಸಿ ಆದೇಶಿಸಿದ್ದಾರೆ.

ಶರಣಪ್ಪ ಬೆಟಗೇರಿಯವರು ದಶಕಗಳಿಂದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಾಗಿ, ನರೇಗಲ್ಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ಕಾಂಗ್ರೆಸ್ ಪಕ್ಷವನ್ನು ಬೂತ್ ಮಟ್ಟದಿಂದಲೇ ಬಲಪಡಿಸುವಲ್ಲಿ ಪ್ರಮುಖ ಪಾತ್ರ ನಿರ್ವಹಿಸಿದ್ದಾರೆ. ಅವರ ಈ ಕಾರ್ಯಗಳನ್ನು ವೈಖರಿ ಮೆಚ್ಚಿ ಈ ನೇಮಕವನ್ನು ಮಾಡಿದ್ದಾರೆ.

ಶರಣಪ್ಪ ಅವರು ಅಧ್ಯಕ್ಷರಾಗಿ ಆಯ್ಕೆಯಾಗಿದ್ದಕ್ಕೆ ಅವರ ಕುಟುಂಬ ಪರಿವಾರದವರು ಮತ್ತು ಆಪ್ತವಲಯದವರು ಹರುಷ ವ್ಯಕ್ತಪಡಿಸಿದ್ದಾರೆ.

ತಾಲೂಕಿನಲ್ಲಿ ಗ್ಯಾರಂಟಿ ಯೋಜನೆಯ ಅನುಷ್ಠಾನದ ಜವಾಬ್ದಾರಿಯನ್ನು ನನಗೆ ನೀಡಲಾಗಿದ್ದು, ಎಲ್ಲರಿಗೂ ಸರ್ಕಾರದ ಯೋಜನೆಯಗಳನ್ನು ಸಮರ್ಪಕವಾಗಿ ತಲುಪುವಂತೆ ನೋಡಿಕೊಳ್ಳುವುದಾಗಿ ಬೆಟಗೇರಿಯವರು ತಿಳಿಸಿದ್ದಾರೆ.

## ಫಣೀಂದ್ರಾಚಾರ್ಯ ಅವರಿಗೆ 'ಚಿನ್ಮಯ ಕಲಾಶ್ರೀ' ಪ್ರಶಸ್ತಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಕಳೆದ 14 ವರ್ಷಗಳಿಂದ ಗದಗ ಜಿಲ್ಲೆಯ ಸಾಂಸ್ಕೃತಿಕ ವಲಯದಲ್ಲಿ ತನ್ನದೇ ಆದ ವಿಶಿಷ್ಟ ಸೇವೆ ಸಲ್ಲಿಸುತ್ತಿರುವ ನಗರದ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿಯು ಪ್ರತಿವರ್ಷ ವಿಶ್ವರಂಗಭೂಮಿ ದಿನಾಚರಣೆ ಆಚರಿಸುತ್ತ, ರಂಗಭೂಮಿ ಕ್ಷೇತ್ರದಲ್ಲಿ ಅದರಲ್ಲೂ ವಿಶೇಷವಾಗಿ ಹವ್ಯಾಸಿ ಕ್ಷೇತ್ರದಲ್ಲಿ ಅನುಪಮ ಸೇವೆ ಸಲ್ಲಿಸಿದ ಕಲಾವಿದರಿಗೆ 'ಚಿನ್ಮಯ ಕಲಾಶ್ರೀ' ಪ್ರಶಸ್ತಿ ನೀಡುತ್ತ ಬಂದಿದೆ. ಪ್ರಸಕ್ತ ಎಂಟನೇ ವರ್ಷದ ಪ್ರಶಸ್ತಿಗೆ ನಗರದ ಹಿರಿಯ ರಂಗ ಸಾಹಿತಿಗಳು ಹಾಗೂ ನಿರ್ದೇಶಕರಾದ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ ಆಯ್ಕೆಯಾಗಿದ್ದು, ಅವರ ನಿವಾಸದಲ್ಲಿ ಸತ್ಕರಿಸುವ ಮೂಲಕ ಅಧಿಕೃತವಾಗಿ ಆಹ್ವಾನಿಸಲಾಯಿತು.

ಮಾ. 27ರಂದು ಸಂಜೆ 6 ಗಂಟೆಗೆ ನಗರದ ಕಬ್ಬಿಗರ ಕೂಟದ ಸಾಹಿತ್ಯ ಭವನದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಚಿನ್ಮಯ ಸಾಂಸ್ಕೃತಿಕ ಅಕಾಡೆಮಿಯ ಅಧ್ಯಕ್ಷರಾದ ಮೌನೇಶ ಸಿ.ಬಡಿಗೇರ(ನರೇಗಲ್ಲ) ತಿಳಿಸಿದರು.

ಈ ಸಂದರ್ಭದಲ್ಲಿ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿಯ ಗೌರವಾಧ್ಯಕ್ಷ ಪ್ರೊ. ಎಮ್.ಎಸ್. ಕುಲಕರ್ಣಿ, ಹಿರಿಯ ಸಾಹಿಗಳಾದ ಅಂದಾನೆಪ್ಪ ವಿಭೂತಿ, ಅಕಾಡೆಮಿ ಗೌರವ ಸಲಹೆಗಾರರಾದ ಡಾ. ದತ್ತಪ್ರಸನ್ನ ಲ.ಪಾಟೀಲ, ಶ್ರೀಗುರು ರಾಘವೇಂದ್ರ ಸೇವಾ ಸಮೀತಿಯ ವಾದಿರಾಜ ಸೊರಟೂರ, ಶ್ರೀಧರ ಕುಲಕರ್ಣಿ, ಕೇಶವ ಜಹಗಿರದಾರ, ವಿಠ್ಠಲರಾವ್ ದೇಶಪಾಂಡೆ, ಬೊಮ್ಮಣಗಿ, ಕಲಾವಿದರಾದ ವಿಶ್ವನಾಥ ಬೇಂದ್ರೆ, ಉಜ್ವಲ್ ಕಬಾಡಿ, ಅಮರೇಶ ರಾಮಪೂರ ಸೇರಿದಂತೆ ಶ್ರೀರಾಘವೇಂದ್ರ ಕಲಾ ಬಳಗದ ಕಲಾವಿದರು ಹಾಗೂ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿಯ ಸದಸ್ಯರು ಹಾಜರಿದ್ದರು.

## ಸರಕಾರಿ ವಾಹನ, ಅತಿಥಿ ಗೃಹಗಳು ವಶಕ್ಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಲೋಕಸಭೆ ಸಾರ್ವತ್ರಿಕ ಚುನಾವಣೆ-2024 ಎಪ್ರಿಲ್ ಮತ್ತು ಮೇ ತಿಂಗಳಲ್ಲಿ ಜರುಗಲಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್, ನಗರಸಭೆ, ನಗರಾಭಿವೃದ್ಧಿ ಪ್ರಾಧಿಕಾರ, ವಿವಿಧ ನಿಗಮ/ಮಂಡಳಿಗಳಿಗೆ ಸಹಕಾರ ಸಂಘಗಳ ಮತ್ತು ಉದ್ದಿಮೆಗಳ ಅಧಿಕಾರೇತರರಿಗೆ ಒದಗಿಸಲಾದ ಸರಕಾರಿ ವಾಹನಗಳನ್ನು ತಕ್ಷಣದಿಂದ ಹಿಂದಕ್ಕೆ ಪಡೆಯಲಾಗಿದೆ. ಅವುಗಳನ್ನು ಆಯಾ ತಾಲೂಕಿನ ತಹಸೀಲ್ದಾರರ ವಶಕ್ಕೆ ಚುನಾವಣಾ ಪ್ರಕ್ರಿಯೆ ಮುಗಿಯುವವರೆಗೆ ನೀಡತಕ್ಕದ್ದು.

ಜಿಲ್ಲೆಯಲ್ಲಿನ ಎಲ್ಲ ನಿರೀಕ್ಷಣಾ ಮಂದಿರಗಳು, ಪ್ರವಾಸಿ ಮಂದಿರಗಳು, ನಿಗಮಗಳ ಅತಿಥಿ ಗೃಹಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಚುನಾವಣಾ ಪ್ರಕ್ರಿಯೆ ಮುಗಿಯುವವರೆಗೆ ಜಿಲ್ಲಾಧಿಕಾರಿಗಳ ಅಧೀನಕ್ಕೆ ಪಡೆದುಕೊಳ್ಳಲಾಗಿದೆ. ತಹಸೀಲ್ದಾರರು ತಮ್ಮ ತಾಲೂಕಿನ ಮೇಲ್ಕಾಣಿಸಿದ ಕಟ್ಟಡಗಳನ್ನು ತಮ್ಮ ವಶಕ್ಕೆ ಪಡೆದುಕೊಂಡು ವರದಿ ಸಲ್ಲಿಸತಕ್ಕದ್ದು. ಜಿಲ್ಲಾಧಿಕಾರಿಗಳ ಪೂರ್ವಾನುಮತಿ ಇಲ್ಲದೇ ಯಾವುದೇ ಉದ್ದೇಶಕ್ಕೆ ನೀಡಬಾರದು ಎಂದು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ದಂಡಾಧಿಕಾರಿಗಳಾದ ವೈಶಾಲಿ ಎಂ.ಎಲ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯದಲ್ಲಿ ನೀರಿನ ಅಭಾವ, ಬರ ಪರಿಹಾರ ವಿಚಾರಗಳ ಬಗ್ಗೆ ಪ್ರಧಾನಿ ಉತ್ತರಿಸಲಿ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಶಿವಮೊಗ್ಗಕ್ಕೆ ಆಗಮಿಸಿರುವ ಹಿನ್ನೆಲೆಯಲ್ಲಿ, ರಾಜ್ಯದಲ್ಲಿನ ಕೆಲವು ಪ್ರಮುಖ ವಿಚಾರಗಳ ಬಗ್ಗೆ ಅವರು ಪ್ರಧಾನಿ ಅವರಿಂದ ಕಾಂಗ್ರೆಸ್ ಉತ್ತರ ಬಯಸಿದೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಸರಣಿ ಟ್ವೀಟ್ ಮಾಡಿರುವ ಎಐಸಿಸಿ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ಕರ್ನಾಟಕ ರಾಜ್ಯದಲ್ಲಿ ನೀರಿನ ಅಭಾವ ಹೆಚ್ಚಾಗಿದ್ದು, ರಾಜ್ಯದ ಬಹುತೇಕ ಭಾಗ ಬರಪೀಡಿತವಾಗಿವೆ. 236 ತಾಲೂಕುಗಳ ಪೈಕಿ 223 ತಾಲ್ಲೂಕುಗಳನ್ನು ಬರ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಲಾಗಿದೆ. ಕರ್ನಾಟಕ ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ 18,172 ಕೋಟಿ ಬರ ಪರಿಹಾರಕ್ಕೆ ಮನವಿ ಮಾಡಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka